ಬೆಂಗಳೂರು, ಕೋಲಾರ, ಹಾಸನ, ಚಿತ್ರದುರ್ಗ, ದಾವಣಗೆರೆ, ವಿಜಯನಗರ, ಬಳ್ಳಾರಿ, ರಾಯಚೂರು, ವಿಜಯಪುರ, ಕಲಬುರ್ಗಿ

ದಶಕದ ನಡಿಗೆ... ನೊಂದವರ ಧ್ವನಿ

# ಸಹಾಯವಾಣಿ

www.sahayavani.com SAHAYAVANI RNI No: KARKAN/2014/54928 KANNADA DAILY PAPER ಕನ್ನಡ ದಿನಪತ್ರಿಕೆ

ಸಂಪುಟ: 11 Vol:11 ಸಂಚಿಕೆ: 122 Issue:122 ದಿನಾಂಕ:18-06-2024 Date:18-06-2024 ಮಂಗಳವಾರ Tuesday ಪುಟ:4 Page:4 ರೂ.: 3-00 Rs.3-00

ಸಂಪಾದಕರು: ಎಸ್.ಕೆ.ಒಡೆಯರ್ ಉಪಸಂಪಾದಕರು: ಸುಚಿತ್ರ ಎಸ್. ಒಡೆಯರ್ ಎಂಬಿಎ ಗೌರವ ಸಂಪಾದಕರು: ಗುರುರಾಜು ಎಂ., ಫೋ: 080-31212322 ಮೊ.: 9902543494 E-mail:sahayavany@gmail.com

# ಪ್ರತಿಭಟಿಸಲು ನೈತಿಕತೆಯಿಲ್ಲ: ಬಿಜೆಪಿ ವಿರುದ್ಧ ಸಿಎಂ ಗುಡುಗು



ಬೆಂಗಳೂರು, ಜೂ. 17–

ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ ವಿರುದ್ಧ ಬಿಜೆಪಿಯವರಿಗೆ ಪ್ರತಿಭಟನೆ ಮಾಡುವ ನೈತಿಕತೆ ಇಲ್ಲ ಎಂದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಕೇಂದ್ರದಲ್ಲಿ ನರೇಂದ್ರ ಮೋದಿ ಪ್ರಧಾನಿಯಾದ ಮೇಲೆ ಪೆಟ್ರೋಲ್–ಡೀಸೆಲ್ ಬೆಲೆಯಲ್ಲಿ ಭಾರೀ ಹೆಚ್ಚಳವಾಗಿದೆ ಎಂದು ತಿರುಗೇಟು ನೀಡಿದ್ದಾರೆ.

ಮುಖ್ಯಮಂತ್ರಿಗಳ ಗೃಹ ಕಚೇರಿ ಕೃಷ್ಣಾದಲ್ಲಿಂದು ಸುದ್ದಿಗೋಷ್ಠಿಯಲ್ಲಿ ಪೆಟ್ರೋಲ್, ಡೀಸೆಲ್ ಮೇಲಿನ ಮಾರಾಟ ತೆರಿಗೆ ಏರಿಕೆಯನ್ನು ಸಮರ್ಥಿಸಿಕೊಂಡ ಅವರು, ಅಭಿವೃದ್ಧಿ ಕಾರ್ಯಗಳಿಗೆ ಹೆಚ್ಚು ಸಂಪನ್ಮೂಲ ಕ್ರೋಢೀಕರಿಸಲು ಪೆಟ್ರೋಲ್, ಡೀಸೆಲ್ ಮೇಲೆ ಮಾರಾಟ ತೆರಿಗೆ ಏರಿಕೆ ಮಾಡಿದ್ದೇವೆ. ಆದರೆ ಬೇರೆ ರಾಜ್ಯಗಳಿಗಿಂತ ರಾಜ್ಯದಲ್ಲಿ ಪೆಟ್ರೋಲ್, ಡೀಸೆಲ್ ದರ ಕಡಿಮೆ ಇದೆ ಎಂದರು.

ದೇಶದಲ್ಲಿ ಜಿಎಸ್‌ಟಿ ಜಾರಿಯಾದ ಮೇಲೆ ರಾಜ್ಯಗಳಿಗೆ ಸಂಪನ್ಮೂಲ ಕ್ರೋಢೀಕರಣಕ್ಕೆ ತೈಲ, ಅಬಕಾರಿ ಮತ್ತು ಸ್ಟಾಂಪ್ ಡ್ಯೂಟಿ ಮೇಲೆ ತೆ–ರಿಗೆ ಹೆಚ್ಚಿಸುವ ಅಧಿಕಾರ ಇದೆ. ಈಗ ಅಭಿವೃದ್ಧಿ ಕಾರ್ಯಗಳಿಗೆ ಹೆಚ್ಚು ಹಣ ಹೊಂದಿಸಲು ಸ್ವಲ್ಪ ಮಟ್ಟಿಗೆ ತೈಲದ ಮೇಲಿನ ದರ ಏರಿಕೆ ಮಾಡಿದ್ದೇವೆ ಎಂದರು.

ರಾಜ್ಯದಲ್ಲಿ ಪೆಟ್ರೋಲ್, ಡೀಸೆಲ್ ಮೇಲೆ ಮಾರಾಟ ತೆರಿಗೆ ಹೆಚ್ಚಳ ಮಾಡಿರುವುದಕ್ಕೆ ಹೋರಾಟ ನಡೆಸುತ್ತಿರುವ ಬಿಜೆಪಿಯವರಿಗೆ ನಮ್ಮ ವಿರುದ್ಧ ಹೋರಾಟ ಮಾಡುವ ನೈತಿ–ಕತೆ ಇಲ್ಲ. ಕೇಂದ್ರದಲ್ಲಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಪೆಟ್ರೋಲ್, ಡೀಸೆಲ್ ಬೆಲೆಯಲ್ಲಿ ಹೆಚ್ಚಳವಾಗಿದೆ. ಅಬಕಾರಿ ಸುಂಕವೂ ಹೆಚ್ಚಾಗಿದೆ. ಇವರು ಪ್ರತಿಭಟನೆ ಮಾಡುವುದಿದ್ದರೆ ಕೇಂದ್ರದ ವಿರುದ್ಧ ಮಾಡಬೇಕು ಎಂದು ತಿರುಗೇಟು ನೀಡಿದರು.

ಹಿಂದೆ ಮನಮೋಹನ್‌ಸಿಂಗ್ ಅವರು ಪ್ರಧಾನಿಯಾಗಿದ್ದಾಗ ಪೆಟ್ರೋಲ್ ಬೆಲೆ 72 ರೂಪಾಯಿ ಇತ್ತು. ಮೋದಿ ಪ್ರಧಾನಿಯಾದ ಮೇಲೆ 100 ರೂಪಾಯಿ ದಾಟಿದೆ. ಹಾಗೆಯೇ ಡೀಸೆಲ್ ಬೆಲೆಯೂ ಹೆಚ್ಚಾಗಿದೆ. ಜತೆ–ಗೆ ಪೆಟ್ರೋಲ್, ಡೀಸೆಲ್ ಮೇಲಿನ ಅಬಕಾರಿ ಸುಂಕವನ್ನೂ ಮೂರು ಪಟ್ಟು ಹೆಚ್ಚಿಸಲಾಗಿದೆ. ಹೀಗಿರುವಾಗ ಬಿಜೆಪಿಯವರು ರಾಜ್ಯ ಸರ್ಕಾರದ ವಿರುದ್ಧ ಪ್ರತಿಭಟನೆ ಮಾಡುವುದರಲ್ಲಿ ಅರ್ಥವಿಲ್ಲ. ಕೇಂದ್ರದ ವಿರುದ್ಧ ಪ್ರತಿಭಟನೆ ಮಾಡಲಿ ಎಂದು ಕುಟುಕಿದರು.

ಗ್ಯಾರಂಟಿ ಯೋಜನೆಗಳಿಗೆ ಹಣ ಹೊಂದಿಸಲು ಪೆಟ್ರೋಲ್, ಡೀಸೆಲ್ ಮೇಲಿನ ತೆರಿಗೆ ಹೆಚ್ಚಳ ಮಾಡಲಾಗಿದೆ ಎಂಬ ಬಿಜೆಪಿ ನಾಯಕರ ಹೇಳಿಕೆಗೆ ಕಿಡಿಕಾರಿದ ಅವರು, ಗ್ಯಾರಂಟಿ ಯೋಜನೆಗಳಿಗೆ 60 ಸಾವಿರ ಕೋಟಿ ರೂ. ಖರ್ಚು ಮಾಡುತ್ತೇವೆ. ಪೆಟ್ರೋಲ್, ಡೀಸೆಲ್ ಮೇಲಿನ ಮಾರಾಟ ತೆರಿಗೆ ಏರಿಕೆ ಮಾಡುವುದರಿಂದ 3 ಸಾವಿರ ಕೋಟಿ ರೂ. ಆದಾಯ ಬರುತ್ತದೆ ಅಷ್ಟೇ. ಬಿಜೆಪಿಯವರಿಗೆ ಅದರಲ್ಲೂ ವಿಪಕ್ಷ ನಾಯಕ –3ನೇ ಪುಟಕ್ಕೆ

## ನಟ ದರ್ಶನ್ ಬಂಧನದ ಬಳಿಕ ಆರೋಪಿಗಳ ಮುಖಾಮುಖಿ

ಬೆಂಗಳೂರು:–

ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಕೃತ್ಯದಲ್ಲಿ ಭಾಗಿಯಾಗಿರುವ ಕೆಲವರು ನಟ ದರ್ಶನ್ ಬಂಧಿತನಾದ ಬಳಿಕವೇ ಮುಖಾಮುಖಿ ಭೇಟಿಯಾಗಿರುವುದು ಪೊಲೀಸರ ತನಿಖೆಯಲ್ಲಿ ಪತೆ–ಯಾಗಿದೆ.

ದರ್ಶನ್‌ಗಾಗಿ ಅಂದಾಭಿಮಾನದಿಂದ ಕೃತ್ಯ ಎಸಗಿದವರಲ್ಲಿ ಕೆಲವರು ದರ್ಶನ್ ಅವರನ್ನು ಮುಖಾಮುಖಿ ನೋಡಿದ್ದೇ ಪೊಲೀಸ್ ಠಾಣೆಯಲ್ಲಿ ಎನ್ನಲಾಗಿದೆ.

ಪ್ರಕರಣದಲ್ಲಿ ಪವಿತ್ರಾಗೌಡ, ಆಕೆ–ಯ ಮ್ಯಾನೇಜರ್ ಪವನ್, ಸ್ಟೋನಿಬ್ರೂಕ್ಸ್ ಮಾಲೀಕ ವಿನಯ್,



ಸ್ಕಾರ್ಪಿಯೋ ಕಾರು ಮಾಲೀಕ ಪುನೀತ್,

### ಪಟ್ಟು ಬಿಡದ ಪೊಲೀಸ್:

ದರ್ಶನ್ ಗ್ಯಾಂಗ್‌ನಿಂದ ಪೊಲೀಸರು ಇದುವರೆಗೆ 10 ಮೊಬೈಲ್‌ಗಳನ್ನು ವಶಪಡಿಸಿಕೊಂಡಿದ್ದು,ಡೇಟಾ ವರದಿಗಾಗಿ ಕಾಯುತ್ತಿದ್ದಾರೆ. ಇನ್ನು ಕೆಲವು ಮೊಬೈಲ್‌ಗಳಲ್ಲಿದ್ದ ಸಾಕ್ಷ್ಯಗಳ ಆಧಾರದ ಮೇಲೆ ಪೊಲೀಸರು ಹೆಚ್ಚಿನ ವಿಚಾರಣೆ ನಡೆಸುತ್ತಿದ್ದು, ಆರೋಪಿಗಳು ಇನ್ನೂ ಕೆಲವು ಮೊಬೈಲ್‌ಗಳ ಪಾಸ್‌ವರ್ಡ್ ನೀಡುತ್ತಿಲ್ಲ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಇಷ್ಟಾದರೂ ಪಟ್ಟು ಬಿಡದ ಪೊಲೀಸ್ ಅಧಿಕಾರಿಗಳು ಹೆಚ್ಚಿನ ತನಿಖೆ ನಡೆಸುತ್ತಿದ್ದಾರೆ.

ದರ್ಶನ್ ಮ್ಯಾನೇಜರ್ ನಾಗರಾಜ್, ವಿನಯ್,ದೀಪಕ್, ಪ್ರದೋಶ್,

### ಪತ್ತೆಯಾಗದ ಮೊಬೈಲ್:

ಕಳೆದ ಹತ್ತು ದಿನಗಳಿಂದ ಹುಡುಕಾಡಿದರೂ ಪ್ರಕರಣದಲ್ಲಿ ಪ್ರಮುಖ ಸಾಕ್ಷಿಯಾಗಿರುವ ರೇಣುಕಾಸ್ವಾಮಿ ಮೊಬೈಲ್ ಪತ್ತೆಯಾಗಿಲ್ಲ. ಅಶ್ಲೀಲ ಕಮೆಂಟ್ ಸಂಬಂಧಪಟ್ಟಂತೆ ಇದರಿಂದ ಸಾಕ್ಷಿಗಳನ್ನು ರಿಟ್ರೇವ್ ಮಾಡಬೇಕಾಗಿದೆ. ಆರೋಪಿಗಳು ರೇಣುಕಾಸ್ವಾಮಿ ಮೊಬೈಲ್‌ನಲ್ಲೇ ಕ್ಷಮಾಪಣಾ ವಿಡಿಯೋ ಮಾಡಿಸಿದ್ದರು. ಆರ್‌ಆರ್ ನಗರ ಪಟ್ಟ–ಣಗೆರೆ ಶೆಡ್, ಕಿಡ್ನಾಪ್ ಮಾಡಿದ ರವಿಯ ಈಟಿಯೋಸ್ ಕಾರು ಸೇರಿ ಹಲವು ಕಡೆ ಹುಡುಕಿದರೂ ಮೊಬೈಲ್ ಪತ್ತೆಯಾಗಿಲ್ಲ.

ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ತನಿಖೆಯನ್ನು ಚುರುಕುಗೊಳಿಸಿದ್ದಾರೆ. ಆದರೆ, ವಿಚಾರಣೆ ವೇಳೆ ಮೊಬೈಲ್ ಪಾಸ್‌ವರ್ಡ್ ನೀಡಲು ದರ್ಶನ್ ಮತ್ತು ಆತನ ಗ್ಯಾಂಗ್ ನಿರಾಕರಿಸುತ್ತಿದೆ. ಇದ–ರಿಂದ ಪೊಲೀಸರ ತನಿಖೆಗೆ ಅಡಚಣೆ–ಯಾಗುತ್ತಿದೆ ಎಂದು ತಿಳಿದುಬಂದಿದೆ.

ಚಿತ್ರದುರ್ಗದ ರಾಘವೇಂದ್ರ, ಮಂಡ್ಯದ ನಂದೀಶ್ ಮಾತ್ರ ದರ್ಶನ್‌ಗೆ ನೇರ ಪರಿಚಯವಿತ್ತು. –3ನೇ ಪುಟಕ್ಕೆ

## ಬಜೆಟ್ ಮಂಡನೆಗೆ ನಿರ್ಮಲಾ ಸಿದ್ಧತೆ



ನವದೆಹಲಿ:–

2024–25ನೇ ಸಾಲಿನ ಪೂರ್ಣ ಪ್ರಮಾಣದ ಮುಂಗಡ ಪತ್ರ ಮಂಡನೆಗೆ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ನಾಳೆಯಿಂದ ಪೂರ್ವಭಾವಿ ಸಭೆ ನಡೆಸಲಿದ್ದು ಪ್ರಧಾನಿ ನರೇಂದ್ರ ಮೋದಿ ಅವರ 3.0 ಸರ್ಕಾರದ ಕಾರ್ಯಯೋಜನೆ ಪ್ರಕಟಿಸಲು ಸಿದ್ಧತೆ ನಡೆಸಿದ್ದಾರೆ.ಲೋಕಸಭೆ ಚುನಾವಣೆಗೂ ಮುನ್ನ ಫೆಬ್ರವರಿ 1 ರಂದು ಮಧ್ಯಂತರ ಬಜೆಟ್ ಮಂಡಿಸಿದ್ದ ನಿರ್ಮಲಾ ಸೀತಾರಾಮನ್ ಅವರು ಮೂರನೇ ಬಾರಿಗೆ ಕೇಂದ್ರದಲ್ಲಿ ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಸರ್ಕಾರ ಅಸ್ತಿತ್ವಕ್ಕೆ ಬಂದ ನಂತರ ಪೂರ್ಣ ಪ್ರಮಾಣದ ಬಜೆಟ್ ಮಂಡಿಸಿ ಒಪ್ಪಿಗೆ ಪಡೆಯಲು ಮುಂದಾಗಿದ್ದಾರೆ. ಜುಲೈ ತಿಂಗಳ ಮಧ್ಯಭಾಗದಲ್ಲಿ ಪೂರ್ಣ ಪ್ರಮಾಣದ ಬಜೆಟ್ ಮಂಡನೆ ಆಗಲಿರುವ ಹಿನ್ನೆಲೆಯಲ್ಲಿ ನಿರ್ಮಲಾ ಸೀತಾರಾಮನ್ ಅವರು ನಾಳೆ ಇಲಾಖೆಯ ಕಾರ್ಯದರ್ಶಿ ಸಂಜಯ್ ಮಲ್ಹೋತ್ರಾ ಅವರೊಂದಿಗೆ ಸಭೆ ನಡೆಸಲಿದ್ದಾರೆ ನಂತರ ವಿವಿಧ ಕೈಗಾರಿಕಾ ಚೇಂಬರ್ಸ್ ಜೊತೆಗೆ ಬಜೆಟ್ ಪೂರ್ವ ಭಾವಿ ಸಭೆ ಜೂನ್ 20 ರಂದು ನಡೆಯಲಿದೆ ಎಂದು ಉದ್ಯಮದ ಮೂಲಗಳು ತಿಳಿಸಿವೆ. –3ನೇ ಪುಟಕ್ಕೆ

## ತೈಲ ದರ ಏರಿಕೆ ಖಂಡಿಸಿ ಬಿಜೆಪಿ ಪ್ರತಿಭಟನೆ

### ಕೈ ವಿರುದ್ಧ ಕಿಡಿ

ಬೆಂಗಳೂರು:–

ರಾಜ್ಯದಲ್ಲಿ ಪೆಟ್ರೋಲ್–ಡೀಸಲ್‌ನ ದರ ಏರಿಕೆ ವಿರೋಧಿಸಿ ಬಿಜೆಪಿ ಇಂದು ರಾಜ್ಯಾದ್ಯಂತ ಪ್ರತಿಭಟನೆ ನಡೆಸಿತು. ಕಳೆದ ಶನಿವಾರ ರಾಜ್ಯಸರ್ಕಾರ ಪೆಟ್ರೋಲ್–ಡೀಸಲ್ ಮೇಲಿನ ಮಾರಾಟ ತೆರಿಗೆಯನ್ನು ಏರಿಸಿತ್ತು. ಇದರಿಂದ ಪೆಟ್ರೋಲ್ ದರ ಲೀ. 3 ರೂ. ಮತ್ತು ಡೀಸಲ್ ದರ 3.50 ಪೈ. ಹೆಚ್ಚಳವಾಗಿತ್ತು. ಈ ದರ ಏರಿಕೆಗೆ ಬಿಜೆಪಿ, ಜೆಡಿಎಸ್ ಸೇರಿದಂತೆ ಹಲವು ಸಂಘಟನೆಗಳು ವಿರೋಧ ವ್ಯಕ್ತಪಡಿಸಿ ದರ ಏರಿಕೆಯನ್ನು ವಾಪಸ್ ಪಡೆಯುವಂತೆ ಆಗ್ರಹಿಸಿದರು. ಆದರೆ,ಮುಖ್ಯಮಂತ್ರಿ ಸಿದ್ದರಾಮಯ್ಯರವರು ದರ ಏರಿಕೆಯನ್ನು ಸಮರ್ಥಿಸಿಕೊಂಡು ಬೇರೆ ರಾಜ್ಯಗಳಿಗೆ ಹೋಲಿಸಿದರೆ ನಮ್ಮ ರಾಜ್ಯದಲ್ಲಿ ಪೆಟ್ರೋಲ್–ಡೀಸಲ್ ದರ ಕಡಿಮೆ ಇದೆ ಎಂದು ಹೇಳಿದರು.ಸರ್ಕಾರದ ತೈಲ ಬೆಲೆ ಏರಿಕೆಯನ್ನು ಖಂಡಿಸಿ ಬಿಜೆಪಿ ಇಂದು ರಾಜ್ಯಾದ್ಯಂತ ಹೋರಾಟ ನಡೆಸಿದ್ದು, ಬೆಂಗಳೂರಿನಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ, ವಿಪಕ್ಷ ನಾಯಕ ಆರ್.ಅಶೋಕ್ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿ ದರ ಏರಿಕೆಯನ್ನು ಕೂಡಲೇ ಹಿಂಪಡೆಯುವಂತೆ ಆಗ್ರಹಿಸಿತು.ಬೆಂಗಳೂರಿನ ಸ್ವತಂತ್ರ ಉದ್ಯಾನವನದಲ್ಲಿ ನಡೆದ ಪ್ರತಿಭಟನೆಯಲ್ಲಿ ಬಿಜೆಪಿಯ ಹಲವು ಶಾಸಕರು, ಸಂಸದರು, ಮುಖಂಡರುಗಳು ಹಾಗೂ ನೂರಾರು ಕಾರ್ಯಕರ್ತರು ಭಾಗಿಯಾಗಿದ್ದು



ಪೆಟ್ರೋಲ್ ಹಾಗೂ ಡೀಸೆಲ್ ದರ ಏರಿಕೆ ಮಾಡಿರುವ ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿಜೆಪಿ ವತಿಯಿಂದ ನಗರದಲ್ಲಿ ಹಮ್ಮಿಕೊಂಡಿರುವ ಪ್ರತಿಭಟನೆಯಲ್ಲಿ ವಿಧಾನ ಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್‌ರವರು ಎತ್ತಿನಗಾಡಿ ಮೇಲೆ ಆಗಮಿಸಿ ವಿನೂತನ ರೀತಿಯಲ್ಲಿ ಪ್ರತಿಭಟಿಸಿದರು.

ರಾಜ್ಯಸರ್ಕಾರದ ವಿರುದ್ಧ ಧಿಕ್ಕಾರದ ಘೋಷಣೆಗಳನ್ನು ಕೂಗಿ ಪೆಟ್ರೋಲ್–ಡೀಸಲ್ ದರ ಇಳಿಕೆ ಮಾಡುವ ಘೋಷಣೆಯ ಜತೆಗೆ ಭಿತ್ತಿಪತ್ರಗಳನ್ನು ಪ್ರದರ್ಶಿಸಿದರು.ರಾಜ್ಯದ ಕಾಂಗ್ರೆಸ್ ಸರ್ಕಾರ ಜನವಿರೋಧಿ ಸರ್ಕಾರ, ಪೆಟ್ರೋಲ್–ಡೀಸಲ್ ಬೆಲೆ ಏರಿಕೆಯಿಂದ ಜನಸಮಾನ್ಯರಿಗೆ ತೊಂದರೆಯಾಗುತ್ತದೆ ಅಗತ್ಯ ವಸ್ತುಗಳ ಬೆಲೆ ಏರಿಕೆಯೂ ಇದರಿಂದ ಆಗಲಿದೆ.

## ರೇಣುಕಾ ಸ್ವಾಮಿ ಹತ್ಯೆ: ನಟ ಚಿಕ್ಕಣ್ಣನಿಗೆ ಸಂಕಷ್ಟ



ಬೆಂಗಳೂರು:–

ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಖ್ಯಾತ ಹಾಸ್ಯ ಕಲಾವಿದ ಚಿಕ್ಕಣ್ಣನಿಗೆ ಢವ ಢವ ಶುರುವಾಗಿದೆ.

ರೇಣುಕಾ ಸ್ವಾಮಿ ಕೊಲೆಯಾದ ಜೂ.9 ರಂದು ದರ್ಶನ್ ಜೊತೆ ಹಾಸ್ಯ ನಟ ಚಿಕ್ಕಣ್ಣ ಮೈಸೂರಿನ ಸ್ಟೋನಿ ಬ್ರೂಕ್‌ನಲ್ಲಿ ಪಾರ್ಟಿ ಮಾಡಿದ್ದು,ಅದರಲ್ಲಿ ದರ್ಶನ್ ಮತ್ತವರ ಗ್ಯಾಂಗ್ ಪಾಲ್ಗೊಂಡಿತ್ತು.

ಮಧ್ಯಾಹ್ನದಿಂದ ಪಾರ್ಟಿ ನಡೆದಿದ್ದು, ಸಂಜೆ ವೇಳೆಗೆ ಸ್ವಲ್ಪ ಕೆಲಸವಿದೆ ಎಂದು ದರ್ಶನ್ ಎದ್ದು ಹೊರಟಿದ್ದು ಕೃತ್ಯಕ್ಕೆ ಮುನ್ನ ನಡೆಸಿದ ಪಾರ್ಟಿಯ ಸಂಬಂಧ ರೇಣುಕಾ ಸ್ವಾಮಿ ಕೊಲೆ ಕೃತ್ಯದ ತನಿಖೆಯನ್ನು ನಡೆಸುತ್ತಿರುವ ಪೊಲೀಸರು ಹಾಸ್ಯ ನಟ ಚಿಕ್ಕಣ್ಣನಿಗೆ ನೋಟಿಸ್ ನೀಡಲು ಮುಂದಾಗಿದ್ದಾರೆ.

ರೇಣುಕಾ ಸ್ವಾಮಿ ಕೊಲೆ ವಿಚಾರವಾಗಿ –3ನೇ ಪುಟಕ್ಕೆ


## ಪೋಕ್ಸೊ ಪ್ರಕರಣ:ಸಿಐಡಿ ಎದುರು ಬಿಎಸ್‌ವೈ ವಿಚಾರಣೆಗೆ ಹಾಜರು ಹೇಳಿಕೆ ದಾಖಲು

ಬೆಂಗಳೂರು:–

ಪೋಕ್ಸೊ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಮುಖ್ಯಮಂತ್ರಿ ಬಿ.ಎಸ್ ಯಡಿಯೂರಪ್ಪರವರು ಇಂದು ಸಿಐಡಿ ಅಧಿಕಾರಿಗಳಮುಂದೆ ವಿಚಾರಣೆಗೆ ಹಾಜರಾದರು.

ಈ ಪ್ರಕರಣದಲ್ಲಿ ಯಡಿಯೂರಪ್ಪರವರನ್ನು ಬಂಧಿಸದಂತೆ ಹೈಕೋರ್ಟ್ ಸೂಚನೆ ನೀಡಿರುವ ಹಿನ್ನೆಲೆಯಲ್ಲಿ ಬಂಧನದ ಭೀತಿ ಇಲ್ಲದೆ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪರವರು ಸಿಐಡಿ ಅಧಿಕಾರಿಗಳ ಮುಂದೆ ಹಾಜರಾಗಿ ಪ್ರಕರಣಕ್ಕೆ ಸಂಬಂಧಿಸಿದಂತೆ ಅವರಿಂದ ಸಿಐಡಿ ಅಧಿಕಾರಿಗಳು ಹೇಳಿಕೆ ಪಡೆಯಲಿದ್ದಾರೆ. ಇದೊಂದು ಸಂಪೂರ್ಣವಾಗಿ ರಾಜಕೀಯ ಪ್ರೇರಿತ ಷಡ್ಯಂತ್ರ ಎಂದು ಯಡಿಯೂರಪ್ಪ ಈಗಾಗಲೇ ಹೇಳಿಕೆಯಲ್ಲಿ ಉಲ್ಲೇಖಿಸಿದ್ದಾರೆ.

ಯಡಿಯೂರಪ್ಪ ಅವರು ಇಂದೂ ಕೂಡ ಪ್ರತಿ ದಿನ ಏಳುವಂತೆ ಐದು ಗಂಟೆಗೆ ಎದ್ದು ಬೆಳಿಗ್ಗೆ ಮನೆಯ ಬಳಿ ವಾಕಿಂಗ್ ಮಾಡಿ, ಬಳಿಕ ದಿನ ಪತ್ರಿಕೆ ಓದಿದ್ದಾರೆ. ಒಂಬತ್ತು ಗಂಟೆಗೆ ವಕೀಲ ಸಂದೀಪ್ ಪಾಟೀಲ್ ಅವರು ಯಡಿಯೂರಪ್ಪ ಅವರ ಡಾಲರ್ಸ್ ಕಾಲೋನಿ –3ನೇ ಪುಟಕ್ಕೆ



ಅಪ್ರಾಪ್ತೆ ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪನವರು ಸಿಐಡಿ ಕಚೇರಿಗೆ ವಿಚಾರಣೆಗೆ ಕಾರಿನಲ್ಲಿ ಆಗಮಿಸಿದರು.

## ಶೀಘ್ರ ಕುಡಿಯುವ ನೀರಿನ ದರ ಏರಿಕೆ



ಬೆಂಗಳೂರು:–

ತೈಲ ಬೆಲೆ ಏರಿಕೆ ಬೆನ್ನಲ್ಲೆ ಕುಡಿಯುವ ನೀರಿನ ದರ ಏರಿಕೆಯೂ ಹೆಚ್ಚಾಗುವ ಸಾಧ್ಯತೆಗಳಿದೆ. ಬೆಂಗಳೂರು ಜಲಮಂಡಳಿ ನೀರಿನ ದರ ಏರಿಕೆಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು, ನೀರಿನ ದರ ಹೆಚ್ಚಳಕ್ಕೆ ಸರ್ಕಾರದ ಅನುಮತಿಗಾಗಿ ಕಾದು ಕುಳಿತಿದೆ.

ಬೆಂಗಳೂರು ಜಲಮಂಡಳಿ ಕುಡಿಯುವ ನೀರಿನ ದರವನ್ನು ಶೇ. 0ರಷ್ಟು ಹೆಚ್ಚಳ ಮಾಡುವ ಪ್ರಸ್ತಾವವನ್ನು ಸರ್ಕಾರ–ಕ್ಕೆ ಸಲ್ಲಿಸಿದ್ದು, ಸರ್ಕಾರದ ಮಟ್ಟದಲ್ಲಿ ಎಷ್ಟು ಪ್ರಮಾಣದಲ್ಲಿ ದರ ಏರಿಕೆಗೆ ಒಪ್ಪಿಗೆ ನೀಡಬೇಕು ಎಂಬ ಬಗ್ಗೆ ಚರ್ಚೆಗಳು ನಡೆದಿವೆ. ಸದ್ಯದಲ್ಲೇ ನೀರಿನ ದರ ಏರಿಕೆಯಾಗುವುದು ನಿಶ್ಚಿತ. –3ನೇ ಪುಟಕ್ಕೆ

## ನಮ್ಮ ರಾಜ್ಯದಲ್ಲಿ ಇಂಧನ ಬೆಲೆ ಕಡಿಮೆ:ಸಿದ್ದರಾಮಯ್ಯ




ಬೆಂಗಳೂರು:–

ಪೆಟ್ರೋಲ್– ಡೀಸೆಲ್ ಮೇಲಿನ ತೆರಿಗೆ ಹೆಚ್ಚಳದ ಬಳಿಕವೂ ಬಿಜೆಪಿ ಆಡಳಿತದ ರಾಜ್ಯಗಳಿಗಿಂತ, ದಕ್ಷಿಣ ಭಾರತದ ರಾಜ್ಯಗಳಿಗಿಂತ ನಮ್ಮ ರಾಜ್ಯದಲ್ಲಿ ಇಂಧನ ಬೆಲೆ ಕಡಿಮೆ ಇದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಂಕಿ ಅಂಶಗಳ ಸಮೇತ ವಿವರಿಸಿದರು. ಗೃಹ ಕಚೇರಿ ಕೃಷ್ಣದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ತೆರಿಗೆ ಹೆಚ್ಚಳದ ಅನಿವಾರ್ಯತೆಯನ್ನು ಕೇಂದ್ರದ ಮೋದಿ ಸರ್ಕಾರ ಹೇಗೆ ಸೃಷ್ಟಿಸಿತು, ರಾಜ್ಯದ ಪಾಲಿನ ಹಣವನ್ನು ಕೊಡದೇ ಇರುವುದರಿಂದ ಸೃಷ್ಟಿ ಆಗಿರುವ ಪರಿಸ್ಥಿತಿಯನ್ನು ವಿವರಿಸಿದರು. 2015 ರ ಬಳಿಕ ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾ ತೈಲದ ಬೆಲೆ ಅರ್ಧಕ್ಕರ್ಧ ಕಡಿಮೆ ಆದಾಗಲೂ ಅವರ ಲಾಭವನ್ನು ದೇಶದ ಜನರಿಗೆ ನೀಡದೆ ಮೋದಿ ಸರ್ಕಾರ ಇಂಧನ ಬೆಲೆಯನ್ನು ನಿರಂತರವಾಗಿ ಏರಿಸುತ್ತಾ ಹೋಗಿದ್ದರ ಅಂಕಿ ಅಂಶಗಳನ್ನು ಮುಖ್ಯಮಂತ್ರಿಗಳು ಪತ್ರಿಕಾಗೋಷ್ಠಿಯಲ್ಲಿ ವಿವರಿಸಿದರು.

ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ಮೌಲ್ಯವರ್ಧಿತ ತೆ–ರಿಗೆ ಹೆಚ್ಚಳದಿಂದ ಸಂಗ್ರಹವಾಗುವ ಅಂ– –3ನೇ ಪುಟಕ್ಕೆ

## ಬಡವರ ಮೇಲೆ ತೆರಿಗೆ ಹಾಕಿ ಬೇರೆ ರಾಜ್ಯಗಳಿಗೆ ಹೋಲಿಕೆ ಮಾಡುವುದು ರಾಜ್ಯದ ಜನತೆಗೆ ಮಾಡುವ ದ್ರೋಹ: ಬೊಮ್ಮಾಯಿ



ಬೆಂಗಳೂರು:–

ರಾಜ್ಯದ ಕಾಂಗ್ರೆಸ್ ಸರ್ಕಾರ ಗ್ಯಾರೆಂಟಿ ಕೊಡುವ ನೆಪದಲ್ಲಿ ರಾಜ್ಯದ ಬಡವರ ಮೇಲೆ ತೆ–ರಿಗೆ ಹಾಕಿ, ಬೇರೆ ರಾಜ್ಯಗಳಿಗೆ ಹೋಲಿಕೆ ಮಾಡುವ ಮೂಲಕ ರಾಜ್ಯದ ಸಾಮಾನ್ಯ ಜನತೆಗೆ ದ್ರೋಹ ಮಾಡುತ್ತಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ.

ಈ ಕುರಿತು ಎಕ್ಸ್ ಮೂಲಕ ಸರಣಿ –3ನೇ ಪುಟಕ್ಕೆ

## ಸಂಪನ್ಮೂಲ ಕ್ರೋಢಿಕರಣಕ್ಕಾಗಿ ಬೆಲೆ ಹೆಚ್ಚಳ: ಗೃಹ ಸಚಿವ ಪರಮೇಶ್ವರ



ಬೆಂಗಳೂರು:–

ಸಂಪನ್ಮೂಲಕ್ರೋಢಿಕರಿಸುವ ಉದ್ದೇಶದಿಂದ ಪೆಟ್ರೋಲ್, ಡೀಸೆಲ್ ಬೆಲೆ ಹೆಚ್ಚಿಸಲಾಗಿದೆ ಎಂದು ಗೃಹ ಸಚಿವ ಪರಮೇಶ್ವರ ಅವರು ಹೇಳಿದರು. ಸದಾಶಿವನಗರದ ತಮ್ಮ ನಿವಾಸದ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಪಕ್ಕದ ರಾಜ್ಯಗಳಿಗೆ ಹೋಲಿಸಿದರೆ ನಮ್ಮ ರಾಜ್ಯದಲ್ಲಿ ಪೆಟ್ರೋಲ್, ಡೀಸೆಲ್ ಬೆಲೆ ಕಡಿಮೆ ಇದೆ ಎಂದರು.

ಬಿಜೆಪಿಯವರ ಆಡಳಿತಾವಧಿಯಲ್ಲಿ 14 ಬಾರಿ ಪೆಟ್ರೋಲ್, ಡೀಸೆಲ್ ಬೆಲೆ ಹೆಚ್ಚಿಸಿದ್ದರು. ಆಗ ಇವರೆಲ್ಲ –3ನೇ ಪುಟಕ್ಕೆ

# ಸಾಮಾಜಿಕ ತಾಣ ಪಯಣ




ಹಾಡೊಂದ ನಾ ಹಾಡುವೆನು ಹೃದಯ ರಾಗದಲ್ಲಿ.. ಚಿತ್ರದಲ್ಲಿರುವವರು, ಲೈರಾ ಮೇಘನಾ


## ಅತ್ಯಮೂಲ್ಯ ಸಮಯದ ವ್ಯಯ

● ನಿರಂಜನ

ನೀವು ಗಮನಿಸಿದ್ದೀರೋ ಇಲ್ಲವೋ ಅಥವ ಯೋಚಿಸಿದ್ದೀರೋ ಇಲ್ಲವೊ, ನಾನು ನಿಮಗೆ ಈಗ ತಿಳಿಸುವ ವಿಷಯ ನನ್ನನ್ನು ಮನಸನ್ನು ತುಂಬಾ ದಿವಸದಿಂದ ಕೊರೆಯುತ್ತಿದೆ. ಇತ್ತೀಚಿನ ದಿನಗಳಲ್ಲಿ, ಟಿವಿ ಹಾಗೂ ಮೊಬೈಲ್ ಗೀಳಿಗೆ ಅಂಟಿಕೊಂಡದ್ದೇವೆ. ಇದು ಎಲ್ಲಿಯವರೆಗೆ ಬಂದು ನಿಂತಿದೆ ಎಂದರೆ, ಗಂಡ ಹೆಂಡತಿಯನ್ನು, ಹೆಂಡತಿಯನ್ನು ಮಕ್ಕಳು ತಂದೆ ತಾಯಿಯನ್ನಾದರೂ ಬಿಟ್ಟಾರು, ಆದರೆ ಮೊಬೈಲ್ ಮಾತ್ರ ಬಿಡೆವು ಎನ್ನುವ ಸ್ಥಿತಿಗೆ ಬಂದಿದ್ದೇವೆ.

ವಿಷಯಕ್ಕೆ ಬರುವೆ. ನಾವು(ನನ್ನ ಮಟ್ಟಿಗೆ ಹೇಳುವುದಾದರೆ) ನಾವು ಪ್ರತಿ ದಿನ ಟಿವಿ,ಮೊಬೈಲ್ ನಲ್ಲಿ ಯಾವುದೋ ಕಾರ್ಯಕ್ರಮ ನೋಡುವಾಗ ಪ್ರತಿ ಎರಡು ಮೂರು ನಿಮಿಷಗಳಿಗೆ ಜಾಹೀರಾತುಗಳು ಬರುತ್ತವೆ. ಸ್ವಲ್ಪ ಜಾಹಿರಾತು ತೋರಿಸಿದ ನಂತರ ಸಮಯದ ಕೌಂಟಡೌನ್ ಟೈಮ್ ತೋರಿಸಲು ಪ್ರಾರಂಭಿಸುತ್ತಾರೆ.ಆ ಸಮಯದಲ್ಲಿ ಮೊಬೈಲ್ ನಲ್ಲಿ ಫಾರ್ವರ್ಡ್ ಮಾಡಲಾಗದಂತೆ ಮಾಡಿರಲಾಗಿರುತ್ತೆ. ಆಗ ನನಗೆ ಒಂದು ತರಹದ ಆತಂಕ ಅಂತ ಬೇಕಾದರೂ ಅಂದುಕೊಳ್ಳಿ ಅಥವಾ ತೊಳಲಾಟ ಎಂದಾದರೂ ತಿಳಿಯಿರಿ. ಪ್ರತಿ ಕಾರ್ಯಕ್ರಮ ನೋಡುವಾಗಲು ನಾವು ಇಷ್ಟು ಸಮಯ ವ್ಯರ್ಥ ಮಾಡುತ್ತೇವೆ ಎಂದಾದರೆ, ಬರೀ ಜಾಹೀರಾತುಗಳಿಗಾಗಿಯೇ ನಮ್ಮ ಜೀವನದ ಎಷ್ಟು ಅತ್ಯಮ್ಯೂಲ್ಯ ಗಂಟೆಗಳು, ದಿನಗಳು ವ್ಯರ್ಥ ಮಾಡುತ್ತೇವೆ ಎನ್ನುವ ಭಯ ಕಾಡಲು ಶುರುವಾಗುತ್ತೆ.

ಹೀಗೆ ಇಂತಹ ಅನೇಕ ಕೆಲಸಕ್ಕೇ ಬಾರದ ವಾಟ್ಸಾಪ್ ಚಾಟ್, ಮೊಬೈಲ್, ಇನ್ಸ್ಟಾಗ್ರಾಮ್, ಸೋಷಿಯಲ್ ಮೀಡಿಯಾ ಹೀಗೆ ಮುಂತಾದ ಕೆಲಸಕ್ಕೆ ಬಾರದ, ನಮ್ಮ ಸಮಯವನ್ನು ನಮಗೇ ಗೊತ್ತಿರದಂತೆ ನುಂಗುವ ಹಾಕುವ ವಿಷಯವನ್ನು ಬಿಟ್ಟು ಸಾಹಿತ್ಯ, ಇತಿಹಾಸ, ದೇಶ ವಿದೇಶಗಳ ಬಗ್ಗೆ ಪತ್ರಿಕೆ, ಪುಸ್ತಕ ಓದುವ ಮುಖಾಂತರ ತಿಳಿಯುವ ಮುಖಾಂತರ ನಮ್ಮ ಸಮಯವನ್ನು ಸದ್ಬಳಕೆ ಮಾಡಿಕೊಂಡರೆ ಆಗುವ ಸಂತೋಷವೇ ಬೇರೆ ಅಲ್ಲವೇ?



## ಪ್ರೀತಿಯೆಂಬ ಮಾರ್ಗ

● ಶಂಕರಾನಂದ ಹೆಬ್ಬಾಳ

ಮನುಷ್ಯನೆಂದ ಮೇಲೆ ಕಾಯದಲ್ಲಿ ಅರಿಷಡ್ವರ್ಗಗಳು ಇದ್ದದ್ದೆ. ಆದರೆ ಯಾವುದು ಎಷ್ಟಿರಬೇಕು ಅಷ್ಟಿದ್ದರೆ ಏನು ಚಿಂತೆಯಿಲ್ಲ ಅದರಲ್ಲೂ ದ್ವೇಷ ಅಸೂಯೆಗಳು ಮನುಷ್ಯನ ಮನಸ್ಸನ್ನು ವಿಕೃತಿಯತ್ತ ಕೊಂಡೊಯ್ದು ಅವಸಾನವನ್ನೆ ಕಾಣಿಸಿಬಿಡುತ್ತವೆ. ಅಸೂಯೆಯಿಂದ ಹುಟ್ಟಿದ ಕೌರವರ ಸ್ಥಿತಿ ಏಳಿಗೆಯಾಗಲಿಲ್ಲ. ದ್ವೇಷದ ಮನಸ್ಸಿನಲ್ಲಿ ಶಾಂತಿಯಿರುವುದಿಲ್ಲ.


**ಚಿತ್ತದನುಭವ ಭಾವ ಸಂಭಾವನೆಗಳೆಲ್ಲ।**
**ಬತ್ತವದನು ವಿಚಾರಯುಕ್ತಿಗಳು ಕುಟ್ಟೆ॥**
**ತತ್ವತಂಡುಲ ದೊರೆಗುಮುದು ವಿವೇಚಿತತತ್ವ।**
**ನಿತ್ಯ ಭೋಜನ ನಮಗೆ - ಮಂಕುತಿಮ್ಮ॥**

ನಮ್ಮ ಮನದಲ್ಲಿನ ಅನುಭವಗಳು, ಭಾವಗಳು ಭತ್ತವಿದ್ದಂತೆ ಅದನ್ನು ಯುಕ್ತಿ ಹಾಗೂ ವಿಚಾರಗಳೆಂಬ ಒನಕೆಯಿಂದ ಕುಟ್ಟಿದರೆ ಅಕ್ಕಿರೂಪದ ತತ್ವ ಸಿಗುತ್ತದೆ ಅದನ್ನೆ ಆಹಾರವಾಗಿ ಸ್ವೀಕರಿಸಬೇಕು ಎಂಬುದು ಈ ಕಗ್ಗದ ಅರ್ಥ.

ಒಂದೂರಿನಲ್ಲಿ ಒಬ್ಬ ಹುಡುಗನಿದ್ದ. ಇತ ಸದಾಕಾಲ ಪರರನ್ನು ನಿಂದಿಸುವುದು ಹಾಗೂ ಜಗಳವಾಡುವುದು ಹೀಗೆಲ್ಲ ಮಾಡುತಿದ್ದ. ತಂದೆ ಮಗನಿಗೆ ಬುದ್ದಿ ಹೇಳಿ ಹೇಳಿ ರೋಸಿಹೋಗಿದ್ದ. ಮನೆಯ ವಾತಾವರಣ ಹಾಗೂ ಶಾಲೆಯ ವಾತಾವರಣಕ್ಕೆ ಈ ಹುಡುಗ ದೊಡ್ಡ ತಲೆನೋವಾಗಿದ್ದ.ಒಬ್ಬನೆ ಮಗ ಏನು ಮಾಡಬೇಕೆಂಬ ಉಭಯಸಂಕಟದಲ್ಲಿ ಒದ್ದಾಡ ತೊಡಗಿದ. ಮಗನ ಕಿರಿಕಿರಿಗಳು, ಜಗಳಗಳನ್ನು ಬಗೆಹರಿಸಿ ತಂದೆಗೆ ಜೀವನವೆ ಬೇಸರವಾಗಿತ್ತು. ತಂದೆ ಇವನಿಗೆ ಎಷ್ಟು ಬುದ್ದಿ ಹೇಳಿದರೂ ಅದು ಬಂಡೆಮೇಲೆ ನೀರು ಸುರಿದಂತಾಗಿತ್ತು.

ಕೊನೆಗೆ ತಂದೆಯೆ ಇದಕ್ಕೊಂದು ಉಪಾಯ ಕಂಡುಕೊಂಡ. ಆ ದಿನ ಮಗನನ್ನು ಕರೆದು, 'ಮಗನೆ, ನೋಡು ಈ ಕೈಚೀಲವನ್ನು ತಗೆದುಕೋ. ಜತೆಗೆ ಈ ಆಲೂಗಡ್ಡೆಯನ್ನು ತೆಗೆದುಕೋ. ಈಗ ನೀನು ಏನು ಮಾಡಬೇಕೆಂದರೆ, ಪ್ರತಿನಿತ್ಯ ಯಾರ ಜತೆ ನೀನು ಜಗಳವಾಡುತ್ತಿಯೋ ಹಾಗೂ ದ್ವೇಷ ಮಾಡುತ್ತಿಯೋ ಅವರ ಹೆಸರಿನಲ್ಲಿ ಈ ಚೀಲದೊಳಗೆ ಒಂದು ಆಲೂಗಡ್ಡೆಯನ್ನು ಹಾಕಬೇಕು. ಆ ಚೀಲವನ್ನು ಜತೆಯಲ್ಲಿ ಹಿಡಿದು ತಿರುಗಾಡಬೇಕು' ಎಂದು ಹೇಳಿದ. ಹುಡುಗ ಸರಿ ಇದೇನು ಮಹಾಶಿಕ್ಷೆ ಎಂದು ಒಪ್ಪಿಕೊಂಡ. ಮೊದಲನೆ ದಿನ ಹುಡುಗ ಅದರಲ್ಲಿ ಐದು ಆಲೂಗಡ್ಡೆಗಳನ್ನು ಹಾಕಿದ. ಅನಂತರ ಆ ಚೀಲ ತುಂಬುತ್ತಾ ಹೋಯಿತು. ಅದಿರಲಿ ಬರಿ ಚೀಲ ತುಂಬಿದ್ದರೆ ಸಮಸ್ಯೆಯಾಗಲಿಲ್ಲ. ಆ ಆಲೂಗಡ್ಡೆಗಳು ಕೊಳೆತು ವಾಸನೆ ಬರಲಾರಂಭಿಸಿದವು. ಆತನಿಗೆ ದಿನವೂ ಅವುಗಳನ್ನು ಹೊತ್ತು ತಿರುಗುವುದು ಸಾಕಾಗಿ ಹೋಯಿತು.ಕೊನೆಗೆ ಒಂದು ದಿನ ಚೀಲ ಕೆಳಗಿಟ್ಟು 'ಅಪ್ಪಾ...! ಇದು ನನ್ನಿಂದ ಸಾಧ್ಯವಿಲ್ಲ' ಎಂದು ಕುಳಿತುಬಿಟ್ಟ. ತಂದೆಯು ತಲೆಯ ಸವರುತ್ತ, 'ಮಗು ನಾನು ನಿನಗೆ ಇದನ್ನೆ ಹೇಳಿದ್ದು. ಕೋಪ, ದ್ವೇಷ, ಜಗಳ ಮನಸ್ಸನ್ನು ಹಾನಿ ಮಾಡುತ್ತವೆ, ಕೊಳಕಾಗಿಸುತ್ತವೆ. ಹಾಗೆಯೇ ಕೊಳಕಾಗದ ಮತ್ತು ಹಾನಿಮಾಡದ ಪ್ರೀತಿಯನ್ನು ನೀನು ಸಂಪಾದಿಸು ಎಂದು ತಿಳಿಸಿ ಹೇಳಿದ. ಮುಂದೆ ಆ ಮಗು ಅರಿವಿನ ಮೂರ್ತಿಯಾಗಿ ಜಗತ್ಪ್ರಸಿದ್ಧನಾದ.

ನಾವು ನೀವೆಲ್ಲ ಈ ಹುಡುಗನಂತೆ ಬರಿ ದ್ವೇಷ ಅಸೂಯೆಗಳಲ್ಲಿ ಜೀವನವನ್ನು ನರಕವಾಗಿಸಿ ಸುಂದರವಾದ ಜೀವನವನ್ನು ಹಾಳು ಮಾಡಿಕೊಳ್ಳುತ್ತಿದ್ದೇವೆ. ಇರುವುದೆಷ್ಟು ದಿನ ಲೋಕದಲ್ಲಿ ಬರಿ ಮೂರು ದಿನದ ಬದುಕಿನಲ್ಲಿ ನರಕವನ್ನು ನೋಡುತ್ತಿದ್ದೇವೆ. ಯಮನು ತೋರಿಸುವ ನರಕಕ್ಕಿಂತ ಈ ನರಕ ಭಯಂಕರವಾಗಿದೆ. ನಿತ್ಯವೂ ದಿನಪತ್ರಿಕೆಗಳಲ್ಲಿ, ನ್ಯೂಸ್ ಚಾನಲಗಳಲ್ಲಿ ಎಲ್ಲೆಂದರಲ್ಲೆ ಹೊಡೆದಾಟ ಬಡಿದಾಟ ಇವುಗಳದ್ದೆ ಕಾರುಬಾರಾದರೆ ಪ್ರೀತಿಗೆ ಅರ್ಥವೆ ಇಲ್ಲದಂತಾಗುತ್ತದೆ.ಹಾಗಾಗಿ ಎಲ್ಲರೂ ನಮ್ಮವರೆಂದು ಪ್ರೀತಿಸೋಣ, ಪ್ರೀತಿಯ ಹಾದಿಯಲ್ಲಿ ಎಲ್ಲರಿಗೂ ತೋರಿಸಿ ಸುಖಜೀವಿಗಳಾಗಿ ಬದುಕೋಣ.



# ವಿ ಟಾಕೀಸ್

## ಮಮ್ಮೂಟಿ ಜತೆಯಾದ ಸಮಂತಾ



ನಟಿ ಸಮಂತಾ, ಮಯೋಸಿಟಿಸ್ ಎಂಬ ಅಪರೂಪದ ಖಾಯಿಲೆಯಿಂದ ಬಳಲುತ್ತಿದ್ದರು, ಅಮೇರಿಕಾಗೆ ತೆರಳಿ ಚಿಕಿತ್ಸೆ ಪಡೆದು ವಿಶ್ರಾಂತಿ ಪಡೆದಿದ್ದರು. ಹಾಗಾಗಿ ಅವರನ್ನು ಯಾವ ಚಿತ್ರದಲ್ಲಿಯೂ ಕಾಣಲು ಸಾಧ್ಯವಾಗಿರಲಿಲ್ಲ, ಸೋಷಿಯಲ್ ಮೀಡಿಯಾದಲ್ಲಿ ಸಕ್ರೀಯವಾಗಿದ್ದ ಸಮಂತಾ, ತಮ್ಮ ಆರೋಗ್ಯದ ಬಗ್ಗೆ ಅಪ್‌ಡೇಟ್ ನೀಡುವ ಜತೆಗೆ ಕೆಲವು ಫೋಟೋಗಳನ್ನು ಹಂಚಿಕೊ ಳ್ಳುತ್ತಿದ್ದರು, ಈಗ ಸಮ್ಮು ಮತ್ತೆ ನಟನೆಗೆ ಮರಳಿದ್ದಾರೆ. ಮಲೆಯಾಳಂ ಖ್ಯಾತ ನಟ ಮಮ್ಮೂಟಿ ಅಭಿನಯಿಸುತ್ತಿ ರುವ ಹೊಸ ಚಿತ್ರದಲ್ಲಿ ಸಮಂತಾ ನಾಯಕಿಯಾಗಿ ನಟಿಸುತ್ತಿ ದ್ದಾರೆ. ಇದು ಆ್ಯಕ್ಷನ್, ಥ್ರಿಲ್ಲರ್ ಚಿತ್ರವಾಗಿದ್ದು, ಸಮಂತಾ ಕೂಡ ಆ್ಯಕ್ಷನ್‌ನಲ್ಲಿ ಮಿಂಚಲಿದ್ದಾರೆ. ಗೌತಮ್ ವಾಸು ದೇವನ್ ಮೆನನ್ ನಿರ್ದೇಶನದಲ್ಲಿ ಚಿತ್ರ ಮೂಡಿಬರು ತ್ತಿದ್ದು, ಸಿನಿಮಾದ ಶೂಟಿಂಗ್ ಕೂಡ ಆರಂಭವಾಗಿದೆ.



ಟರ್ಬೊ ಚಿತ್ರದ ಗೆಲುವಿನ ಖುಷಿಯಲ್ಲಿರುವ ಮಮ್ಮೂಟಿ ಈಗ ಮತ್ತೆ ಹೊಸ ಅವತಾರದಲ್ಲಿ ಮಿಂಚಲಿದ್ದಾರೆ. ಇದು ಪ್ಯಾನ್ ಇಂಡಿಯಾ ಸಿನಿಮಾವಾಗಿದ್ದು, ಮಲೆಯಾಳಂ, ತೆಲುಗು, ಕನ್ನಡ ಸೇರಿದಂತೆ ಪಂಚಭಾಷೆಗಳಲ್ಲಿ ಮೂಡಿಬರಲಿದೆ. ಇತ್ತ ಸಿಟಾಡೆಲ್ ವೆಬ್ ಸೀರೀಸ್‌ನಲ್ಲಿ ಅಭಿನಯಿಸಿರುವ ಸಮಂತಾ ಅದರ ಬಿಡುಗಡೆಗೆ ಎದಿರು ನೋಡುತ್ತಿದ್ದಾರೆ, ನಟನೆಯ ಜತೆಗೆ ನಿರ್ಮಾದಣದತ್ತಲೂ ಒಲವು ತಾಳಿದ್ದು, ಬಂಗಾರಂ ಚಿತ್ರ ನಿರ್ಮಾಣಕ್ಕೆ ಬಂಡವಾಳ ಹೂಡಿದ್ದಾರೆ. ಈಗ ಮತ್ತೆ ನಟನೆಗೆ ಮರಳಿರುವುದು ಸಿನಿಪ್ರಿಯರಿಗೆ ಖುಷಿ ಕೊಟ್ಟಿದೆ.



## ವಿದ್ಯಾರ್ಥಿಗಳ ಪಾರ್ಟಿ ಸಾಂಗ್



ಅರುಣ್ ಅಮುಕ್ತ ನಿರ್ದೇಶನದ ವಿದ್ಯಾರ್ಥಿ ವಿದ್ಯಾರ್ಥಿನಿಯರೇ ಚಿತ್ರದ ಶೂಟಿಂಗ್ ಮುಕ್ತಾಯವಾಗಿದ್ದು ತೆರೆಗೆ ಬರಲು ಸಿದ್ಧವಾಗಿದೆ. ಸದ್ಯ ಚಿತ್ರದ ಸ್ಟೂಡೆಂಟ್ ಪಾರ್ಟಿ.. ಸಾಂಗ್ ಬಿಡುಗಡೆಯಾಗಿದೆ. ಚೇತನ್ ಕುಮಾರ್ ಸಾಹಿತ್ಯದ ಈ ಹಾಡಿಗೆ ವಿಜೇತ್ ಕೃಷ್ಣ ಸಂಗೀತ ಸಂಯೋಜಿಸಿದ್ದಾರೆ. ರ‍್ಯಾಪ್ ಶೈಲಿಯಲ್ಲಿರುವ ಈ ಗೀತೆ ಚಂದನ್ ಶೆಟ್ಟಿ ಮತ್ತು ವಿಜೇತ್ ಕೃಷ್ಣ ದನಿಯಲ್ಲಿ ಮೂಡಿಬಂದಿದೆ. ಪಾರ್ಟಿ ಸಾಂಗ್ ಅದ್ಭುತವಾಗಿ ಮೂಡಿಬಂದಿದ್ದು, ಯುವ ಸಮೂಹದ ಮನಗೆದ್ದಿದೆ. ಚಂದನ್ ಶೆಟ್ಟಿ, ಅಮರ್, ಭಾವನಾ, ಮನಸ್ವಿ, ವಿವಾನ್, ಭವ್ಯಾ, ಸುನೀಲ್ ಪುರಾಣಿಕ್, ಅರವಿಂದ ರಾವ್, ಸಿಂಚನಾ, ರಘು ರಾಮನಕೊಪ್ಪ, ಪ್ರಶಾಂತ್ ಸಂಬರ್ಗಿ, ಕಾಕ್ರೋಚ್ ಸುಧಿ ಮುಂತಾದವರು ನಟಿಸಿದ್ದಾರೆ. ವೆರೈಟಿ ಕ್ರಿಯೇಷನ್ಸ್ ಬ್ಯಾನರ್‌ನಲ್ಲಿ ಸುಬ್ರಮಣ್ಯ ಕುಕ್ಕೆ ಮತ್ತು ಎ.ಸಿ ಶಿವಲಿಂಗೇಗೌಡ ಈ ಚಿತ್ರವನ್ನು ನಿರ್ಮಾಣ ಮಾಡಿದ್ದಾರೆ. ಕುಮಾರ್ ಗೌಡ ಛಾಯಾಗ್ರಹಣ, ಭರ್ಜರಿ ಚೇತನ್ ಮತ್ತು ವಾಸುಕಿ ವೈಭವ್ ಸಾಹಿತ್ಯ, ಪವನ್ ಗೌಡ ಸಂಕಲನ, ಟೈಗರ್ ಶಿವು, ನರಸಿಂಹ ಸಾಹಸ ನಿರ್ದೇಶನ ಈ ಚಿತ್ರಕ್ಕಿದೆ. ಜುಲೈ 19 ರಂದು ಚಿತ್ರ ರಾಜ್ಯಾದ್ಯಂತ ತೆರೆಗೆ ಬರಲಿದೆ.







## ನಾಡಸಿಂಹ ಕೆಂಪೇಗೌಡರ ಹಾಡು ಬಿಡುಗಡೆ

ಹೆಚ್.ಎಂ.ಕೃಷ್ಣಮೂರ್ತಿ ನಿರ್ಮಿಸಿರುವ ನಾಡಪ್ರಭು ಕೆಂಪೇಗೌಡರ ಕುರಿತ ನಾಡಸಿಂಹ ಕೆಂಪೇಗೌಡ ಎಂಬ ಹಾಡು ಬಿಡುಗಡೆಯಾಗಿದೆ.

ಈ ಹಾಡಿನಲ್ಲಿ ಕೆಂಪೇಗೌಡರ ಪಾತ್ರದಲ್ಲಿ ಕೃಷ್ಣಮೂರ್ತಿ ಕಾಣಿಸಿಕೊಂಡಿದ್ದಾರೆ. ಟಿ.ಎಸ್.ನಾಗಾಭರಣ, ವಿನಯಾ ಪ್ರಸಾದ್, ಧರ್ಮ, ನೀನಾಸಂ ಅಶ್ವತ್, ಮುನಿ, ಹೆಚ್. ವಾಸು, ವಿಕ್ಟರಿ ವಾಸು ಮುಂತಾದವರು ಈ ಹಾಡಿನಲ್ಲಿ ಅಭಿನಯಿಸಿದ್ದಾರೆ. ಕೆ.ರಾಮನಾರಾಯಣ್ ಬರೆದಿರುವ ಈ ಹಾಡಿಗೆ ಶ್ರೀಧರ್ ವಿ ಸಂಭ್ರಮ್ ಸಂಗೀತ ಸಂಯೋಜಿಸಿದ್ದಾರೆ. ಶಂಕರ್ ಮಹಾದೇವನ್ ಮತ್ತು ಅನುರಾಧಾ ಭಟ್ ಹಾಡಿಗೆ ದನಿಯಾಗಿದ್ದಾರೆ. ಭಜರಂಗಿ ಮೋಹನ್ ನೃತ್ಯ ನಿರ್ದೇಶನ, ಕೃಷ್ಣ ಕುಮಾರ್ ಛಾಯಾ ಗ್ರಹಣ ಪುನೀತ್ ಸಂಕಲನ ಈ



**ಬೆಂಗಳೂರು ಹಾಗೂ ಸುತ್ತಮುತ್ತಲ್ಲಿನ ಊರುಗಳಿಗೆ ಮಾಗಡಿ ಕೆಂಪೇಗೌಡರು ಮಾಡಿರುವ ಉಪಕಾರ ಮಹತ್ತರವಾದ್ದದ್ದು. ಅಂತಹ ಮಹಾನುಭಾವರ ಸ್ಮರಣೆಗಾಗಿ ಈ ಹಾಡನ್ನು ನಿರ್ಮಿಸಿದ್ದೇನೆ. ಮೊದಲ ಬಾರಿಗೆ ಕೆಂಪೇಗೌಡರ ಪಾತ್ರದಲ್ಲೂ ಕಾಣಿಸಿಕೊಂಡಿದ್ದೇನೆ.**

**- ಹೆಚ್.ಎಂ.ಕೃಷ್ಣಮೂರ್ತಿ ನಿರ್ಮಾಪಕ**

## ಟೀಸರ್ ನಲ್ಲಿ ಮಿಂಚಿದ ಕಣ್ಣಪ್ಪ



ಅದ್ದೂರಿ ಬಜೆಟ್ ನಲ್ಲಿ ನಿರ್ಮಾಣವಾಗಿರುವ ಪ್ಯಾನ್ ಇಂಡಿಯಾ ಸಿನಿಮಾ ಕಣ್ಣಪ್ಪ ಸೆಟ್ಟೇರಿದಾಗಿನಿಂದಲೂ ಸಖತ್ ಸದ್ದು ಮಾಡುತ್ತಿದೆ. ಸದ್ಯ ಕಣ್ಣಪ್ಪನ ಟೀಸರ್ ರಿಲೀಸ್ ಆಗಿದ್ದು ಸಿನಿಪ್ರಿಯರ ಮನಗೆದ್ದಿದೆ. ವಿಷ್ಣುಮಂಚು ಆ್ಯಕ್ಷನ್ ನಲ್ಲಿಯೇ ಮಿಂಚಿದ್ದಾರೆ. ಪೌರಾಣಿಕ ಕಥೆಯ ಜತೆಗೆ ಐತಿಹಾಸಿಕ ಸ್ಟೋರಿಯೂ ಇಲ್ಲಿದೆ. ಡಾ.ಮೋಹನ್ ಬಾಬು ನಿರ್ಮಾಣದ ಈ ಚಿತ್ರವನ್ನು ಮುಖೇಶ್ ಕುಮಾರ್ ಸಿಂಗ್ ನಿರ್ದೇಶಿಸಿದ್ದಾರೆ. ಕಣ್ಣಪ್ಪ ಎರಡನೇ ಶತಮಾನದ ಚೋಳರ ಕಾಲದ ಕಥೆಯನ್ನು ಆಧರಿಸಿ ನಿರ್ಮಾಣವಾಗುತ್ತಿದೆ. ಶರತ್ ಕುಮಾರ್, ಮೋಹನ್ ಬಾಬು, ಅಕ್ಷಯ್ ಕುಮಾರ್, ಪ್ರಭಾಸ್ ,ಕಾಜಲ್ ಅಗರ್ ವಾಲ್ ಹೀಗೆ ದೊಡ್ಡ ತಾರಾಬಳಗವೇ ಚಿತ್ರದಲ್ಲಿದೆ.

ಕಣ್ಣಪ್ಪ ಕೇವಲ ಸಿನಿಮಾವಲ್ಲ ಇದು ನಮ್ಮ ಇತಿಹಾಸ. ಪ್ರತಿಯೊಬ್ಬರೂ ತಮ್ಮ ತಮ್ಮ ಪಾತ್ರಗಳನ್ನು ಜೀವಿಸಿದ್ದಾರೆ. ಈಗಲೂ ನಾವು ಆ ಪಾತ್ರಗಳಲ್ಲಿ ಉಳಿದಿದ್ದೇವೆ. ಅಷ್ಟೊಂದು ಅಚ್ಚುಕಟ್ಟಾಗಿ ಸಿನಿಮಾ ಮೂಡಿಬಂದಿದೆ ಎಂದು ನಟ ಶರತ್‌ಕುಮಾರ್ ಹೇಳಿದರು.

**ಕಣ್ಣಪ್ಪ ಚೋಳರ ಕಾಲದ ಕಥೆಯಾಗಿದೆ. ಹದಿನಾಲ್ಕನೇ ಶತಮಾನದಲ್ಲಿ ಕವಿ ಧೂರ್ಜಟಿ ಬರೆದಿರುವ ಐತಿಹಾಸಿಕ ವಿಚಾರಗಳನ್ನು ಅಧರಿಸಿ ಚಿತ್ರದಕಥೆ ಹೆಣೆದು ತೆರೆಗೆ ತರಲಾಗುತ್ತಿದೆ. ಪ್ರತಿ ಸನ್ನಿವೇಶಗಳು ಕೂಡ ಅದ್ಭುತವಾಗಿ ಮೂಡಿಬಂದಿವೆ.**

**- ವಿಷ್ಣು ಮಂಚು ನಟ**



**ಕಣ್ಣಪ್ಪ ಚಿತ್ರದ ಶಕ್ತಿಯೇ ನನ್ನ ಕಲಾವಿದರು. ಕೊರೆಯುವ ಚಳಿಯಲ್ಲೂ ಇಡೀ ತಂಡ ಶ್ರಮಿಸಿದೆ. ವಿಷ್ಣು, ಶರತ್ ಕುಮಾರ್, ಮೋಹನ್ ಬಾಬು ನನ್ನ ನಿರೀಕ್ಷೆಗೂ ಮೀರಿದ ಬೆಂಬಲ ನೀಡಿದ್ದಾರೆ.**

**- ಮುಕೇಶ್ ಕುಮಾರ್ ಸಿಂಗ್ ನಿರ್ದೇಶಕ**

ಒಂದನೇ ಪುಟದಿಂದ

## ನಮ್ಮ ರಾಜ್ಯದಲ್ಲಿ ಇಂಧನ ಬೆಲೆ ಕಡಿಮೆ:ಸಿದ್ದರಾಮಯ್ಯ

ಮೂರು ಸಾವಿರ ಕೋಟಿ ರೂಪಾಯಿಗಳು ರಾಜ್ಯದ ಜಾನಗೆ ಸಂದಾಯವಾಗುತ್ತದೆ. ಆ ಹಣ ಜನರ ಕಲ್ಯಾಣ ಕಾರ್ಯಕ್ರಮಗಳಿಗೆ ವಿನಿಯೋಗವಾಗುತ್ತದೆ ಅದು ನಮ್ಮ ಜೇಬಿಗೆ ಹೋಗುವುದಿಲ್ಲ ಎಂದರು.

ಹಿಂದಿನ ಬಿಜೆಪಿ ಸರ್ಕಾರದಲ್ಲಿ ರಾಜ್ಯದ ಪ್ರತಿಯೊಂದು ಯೋಜನೆಗಳಲ್ಲಿಯೂ 40% ತೆರಿಗೆ ಹಣ ಬಿಜೆಪಿ ನಾಯಕರ ಜೇಬಿಗೆ ಹೋಗುತ್ತಿತ್ತು. ಈ ರೀತಿ ಅಂದಾಜು ಒಂದುವರೆ ಲಕ್ಷ ಕೋಟಿ ರೂಪಾಯಿಗಳಷ್ಟು ರಾಜ್ಯದ ಜನರ ಬೆವರಗಳಿಕೆಯ ತೆರಿಗೆ ಹಣವನ್ನು ಈ ಬಿಜೆಪಿ ನಾಯಕರ ತಮ್ಮ ಜೇಬಿಗೆ ತುಂಬಿಸಿಕೊಂಡಿದ್ದಾರೆ ಎಂದರು.

ಇಂತಹ ಲೂಟಿಕೋರರ, ಭ್ರಷ್ಟ, ಜನವಿರೋಧಿ ಬಿಜೆಪಿ ನಾಯಕರಿಗೆ ಜನಕಲ್ಯಾಣಕ್ಕಾಗಿ ಸಲ್ಪ ಪ್ರಮಾಣದ ತೆರಿಗೆ ಹೆಚ್ಚಿಸಿದ್ದನ್ನು ಪ್ರಶ್ನಿಸುವ ಯೋಗ್ಯತೆ ಎಲ್ಲಿದೆ ಎಂದು ಪ್ರಶ್ನಿಸಿದರು.

ಗ್ಯಾರಂಟಿ ಯೋಜನೆಗಳಿಗಾಗಿ ರಾಜ್ಯ ಸರ್ಕಾರ 60 ಸಾವಿರ ಕೋಟಿ ರೂಪಾಯಿಗಳನ್ನು ವ್ಯಯ ಮಾಡುತ್ತಿದೆ. ಇಷ್ಟೂ ಹಣ ರಾಜ್ಯದ ಎಲ್ಲಾ ಜಾತಿ-ಸಮುದಾಯಗಳ ಬಡವರ ಮತ್ತು ಮಧ್ಯಮ ವರ್ಗದವರಿಗೆ ಹೋಗುತ್ತದೆ. ಸದ್ಯದ ಅಲ್ಪ ಪ್ರಮಾಣದ ಡೀಸೆಲ್-ಪೆಟ್ರೋಲ್ ತೆರಿಗೆ ಹೆಚ್ಚಳದಿಂದ ನಮಗೆ ಹೆಚ್ಚುವರಿಯಾಗಿ ಸಂಪನ್ಮೂಲ ಸಂಗ್ರಹ ಆಗುವುದು ಕೇವಲ 3 ಸಾವಿರ ಕೋಟಿ ರೂಪಾಯಿ ಮಾತ್ರ. ಆದರೆ ಗ್ಯಾರಂಟಿಗಳಿಗೆ ನಾವು ಕೊಡುತ್ತಿರುವುದು 60 ಸಾವಿರ ಕೋಟಿ ರೂಪಾಯಿ. ಹೀಗಾಗಿ ಆರ್. ಅಶೋಕ್ ಅವರ ಪೆದ್ದುತನದ ಮಾತುಗಳಿಗೆ ಅರ್ಥವಿಲ್ಲ. ಆರ್.ಅಶೋಕ್ ಗೆ ಇದೆಲ್ಲಾ ಅರ್ಥ ಆಗಲ್ಲ , ಅರ್ಥ ಮಾಡಿಕೊಳ್ಳುವ ಸಾಮರ್ಥ್ಯವೂ ಇಲ್ಲ ಎಂದು ವ್ಯಂಗ್ಯವಾಡಿದರು.

ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಗೃಹ ಕಚೇರಿ ಕೃಷ್ಣಾದಲ್ಲಿ ಮಾಧ್ಯಮದವರೊಂದಿಗೆ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡುತ್ತಾ

ಜನರಿಗೆ ಹೆಚ್ಚಿನ ಹೊರೆಯಾಗದ ರೀತಿಯಲ್ಲಿ ರಾಜ್ಯದ ಅಭಿವೃದ್ಧಿ ಕೆಲಸಗಳಿಗೆ ಸಂಪನ್ಮೂಲ ಕ್ರೋಢೀಕರಣದ ಉದ್ದೇಶದೊಂದಿಗೆ ಪೆಟ್ರೋಲ್, ಡೀಸೆಲ್ ಮಾರಾಟ ತೆರಿಗೆಯಲ್ಲಿ 3 ರೂ. ಗಳಷ್ಟು ಹೆಚ್ಚಿಸಲಾಗಿದೆ

ಅವರು ಇಂದು ಗೃಹ ರಾಜ್ಯ ಸರ್ಕಾರ 3 ರೂ. ಗಳಷ್ಟು ಪೆಟ್ರೋಲ್ ಡೀಸೆಲ್ ದರ ಏರಿಕೆ ಮಾಡಿದ್ದರೂ, ದಕ್ಷಿಣದ ಇತರ ರಾಜ್ಯಗಳು ಹಾಗೂ ಬಿಜೆಪಿ ಆಡಳಿತ ಇರುವ ರಾಜ್ಯಗಳಿಗಿಂತ ಕಡಿಮೆ ಇದೆ ಎಂದು ಅಂಕಿ-ಅಂಶಗಳೊಂದಿಗೆ ಸ್ಪಷ್ಟ ಪಡಿಸಿದರು.

ಕೇಂದ್ರ ಸರ್ಕಾರ ಜಿ.ಎಸ್.ಟಿ. ವ್ಯವಸ್ಥೆ ಜಾರಿಗೊಳಿಸಿದ ನಂತರ ರಾಜ್ಯ ಸರ್ಕಾರಗಳ ಸಂಪನ್ಮೂಲ ಕ್ರೋಢೀಕರಣಕ್ಕೆ ಇರುವ ಅವಕಾಶ ಸೀಮಿತಗೊಂಡಿದೆ. ಕೇಂದ್ರ ಸರ್ಕಾರ ಜಿ.ಎಸ್.ಟಿ. , ಆದಾಯ ತೆರಿಗೆ, ಕೇಂದ್ರ ಅಬಕಾರಿ ಸುಂಕ ಮೊದಲಾದ ಮೂಲಗಳಿಂದ ತೆರಿಗೆ ಸಂಗ್ರಹಿಸುತ್ತದೆ. ರಾಜ್ಯ ಸರ್ಕಾರಕ್ಕೆ ಕೇವಲ ನೋಂದಣಿ ಮತ್ತು ಮುದ್ರಾಂಕ ಶುಲ್ಕ, ವಾಹನ ತೆರಿಗೆ, ಪೆಟ್ರೋಲ್, ಡೀಸೆಲ್ ಮೇಲಿನ ಮಾರಾಟ ತೆರಿಗೆ ಹಾಗೂ ಮದ್ಯದ ಮೇಲಿನ ಮಾರಾಟ ತೆರಿಗೆ ಹೊರತು ಪಡಿಸಿ ಯಾವುದೇ ಮೂಲಗಳಿಲ್ಲ. ಈ ಹಿನ್ನೆಲೆಯಲ್ಲಿ ಇತರ ರಾಜ್ಯಗಳ ಪೆಟ್ರೋಲ್ ಡೀಸೆಲ್ ಬೆಲೆಗೆ ಹೋಲಿಸಿದರೆ ರಾಜ್ಯದ ದರಗಳು ಕಡಿಮೆ ಇರುವುದು ಗಮನಿಸಿ, ರಾಜ್ಯ ಸರ್ಕಾರ ಅಲ್ಪ ಪ್ರಮಾಣದ ತೆರಿಗೆ ಹೆಚ್ಚಳ ಮಾಡಿದೆ ಎಂದು ಮುಖ್ಯಮಂತ್ರಿಗಳು ಸ್ಪಷ್ಟ ಪಡಿಸಿದರು.

ಈ ಬಗ್ಗೆ ಬಿಜೆಪಿಯವರು ಪ್ರತಿಭಟನೆ ಮಾಡುತ್ತಿದ್ದಾರೆ. ಆದರೆ ಅವರಿಗೆ ಪ್ರತಿಭಟನೆ ಮಾಡುವ ನೈತಿಕ ಹಕ್ಕು ಎಲ್ಲಿದೆ ಎಂದು ಪ್ರಶ್ನಿಸಿದರು. ಡಾ. ಮನಮೋಹನ್ ಸಿಂಗ್ ಅವರ ಅವಧಿಯಲ್ಲಿ ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾ ತೈಲ ಬೆಲೆ 113 ಡಾಲರ್ ಇತ್ತು. 2015 ರಲ್ಲಿ ಈ ಬೆಲೆ ಅರ್ಧಕ್ಕರ್ಧ ಕಡಿಮೆಯಾದರೂ, ಬೆಲೆ ಇಳಿಸಿ, ಜನರ ಹೊರೆ ಕಡಿಮೆ ಮಾಡುವ ಕಾಳಜಿಯನ್ನು ನರೇಂದ್ರ ಮೋದಿಯವರು ತೋರಲಿಲ್ಲ. ಬಿಜೆಪಿಯವರು ಯಾರ ವಿರುದ್ಧ ಹೋರಾಡಬೇಕು ಎಂದು ಪ್ರಶ್ನಿಸಿದರು?

ಕರ್ನಾಟಕ ರಾಜ್ಯಕ್ಕೆ ಬಿಜೆಪಿ ಸರ್ಕಾರದಿಂದ ನಿರಂತರ ಅನ್ಯಾಯವಾಗುತ್ತ ಬಂದಿದ್ದರೂ, ಬಿಜೆಪಿಯವರು ದನಿ ಎತ್ತಿಲ್ಲ? ತೆರಿಗೆ ಅನ್ಯಾಯವಾದಾಗ ಸಂಸದರು ಈ ವಿಷಯದ ಕುರಿತು ಮಾತನಾಡಿಲ್ಲ; ರಾಜ್ಯಕ್ಕೆ 15ನೇ ಹಣಕಾಸು ಆಯೋಗವು ವಿಶೇಷ ಅನುದಾನ ನೀಡುವಂತ ಶಿಫಾರಸು ಮಾಡಿದ್ದರೂ, ಕೇಂದ್ರ ಸರ್ಕಾರ ನೀಡಿಲ್ಲ. ಭದ್ರಾ ಮೇಲ್ದಂಡೆ ಯೋಜನೆಗೆ ಆಯವ್ಯಯದಲ್ಲಿ ನಿರ್ಮಲಾ ಸೀತಾರಾಮನ್ ಅವರು 5,000 ಕೋಟಿ ರೂ. ಒದಗಿಸುವುದಾಗಿ ಘೋಷಿಸಿದರೂ, ಬಿಡಿಗಾಸೂ ನೀಡಿಲ್ಲ. ಈ ವಿಷಯಗಳ ಕುರಿತು ಬಿಜೆಪಿಯವರು ದನಿ ಎತ್ತಿದ್ದಾರೆಯೇ? ಬಿಜೆಪಿಯು ಬಡವರು, ದಲಿತರ ವಿರೋಧಿ ಧೋರಣೆ ಹೊಂದಿದೆ ಎಂದು ಅವರು ನುಡಿದರು. ಬರಗಾಲದ ಬಗ್ಗೆ ಪರಿಹಾರ ತೆಗೆದುಕೊಳ್ಳಲು ಕೋರ್ಟಿಗೆ ಹೋಗಬೇಕಾಗಿ ಬಂತು. ಕೋರ್ಟು ಸೂಚನೆ ನೀಡಿದ ನಂತರ 18 ಸಾವಿರ ಕೋಟಿ ಕೇಳಿದರೆ 3454 ಕೋಟಿ ರೂ. ಪರಿಹಾರ ನೀಡಿದ್ದಾರೆ.

ಬಿಜೆಪಿಯವರು ಬಡವರು, ದಲಿತರು, ಜನಸಾಮಾನ್ಯರ ಕಾರ್ಯಕ್ರಮಗಳ ಕಲ್ಯಾಣ ಕಾರ್ಯಕ್ರಮಗಳಿಗೆ ವಿರುದ್ಧವಿದ್ದಾರೆ. ಬಸ್‌ನಲ್ಲಿ ಉಚಿತ ಪ್ರಯಾಣ, ತಿಂಗಳಿಗೆ ಎರಡು ಸಾವಿರ ನೀಡಿದರೆ ಅವರ ಆರ್ಥಿಕ ಶಕ್ತಿ ಹೆಚ್ಚಾಗುವುದಿಲ್ಲವೇ? ಉಚಿತ ವಿದ್ಯುತ್ ನೀಡಿದರೆ ಅವರಿಗೆ ಉಳಿತಾಯವಾಗುವುದಿಲ್ಲವೇ? ಹೆಚ್ಚುವರಿ ಅಕ್ಕಿ ಕೇಳಿದರೆ, ಕೊಟ್ಟಿಲ್ಲ. ಯಾರಾದರೂ ಮಾತಾಡಿದರೇ? ಎಂದು ಪ್ರಶ್ನಿಸಿದರು. ಈ ಬೆಲೆ ಏರಿಕೆಯಿಂದ ಸುಮಾರು 3,000 ಕೋಟಿ ರೂ. ಸಂಪನ್ಮೂಲ ದೊರೆಯಲಿದೆ. ಗ್ಯಾರಂಟಿ ಯೋಜನೆಗಳಿಗೆ 60000 ಕೋಟಿ ರೂ. ಅಗತ್ಯವಿದೆ. ಸರ್ಕಾರ ಪಾಪರ್ ಆಗಿದೆ ಎಂದು ವಿರೋಧ ಪಕ್ಷದ ನಾಯಕರು ಹೇಗೆ ಹೇಳುತ್ತಾರೆ? ನಾವು ಯಾರದ್ದಾದರೂ ಸಂಬಳ ನಿಲ್ಲಿಸಿದ್ದೇವೆಯೇ? ಆಯವ್ಯಯದಲ್ಲಿ ಘೋಷಿಸಿದ ಕಾರ್ಯಕ್ರಮಗಳಿಗೆ ಅನುದಾನ ಒದಗಿಸದೇ ಸ್ಥಗಿತ ಗೊಳಿಸಿದ್ದೇವೆಯೇ ಎಂದು ಅವರು ಪ್ರಶ್ನಿಸಿದರು. ತೈಲ ಬೆಲೆ ಏರಿಕೆಯನ್ನು ಸಮರ್ಥಿಸಿಕೊಂಡ ಮುಖ್ಯಮಂತ್ರಿಯವರು, ಬೆಲೆ ಏರಿಕೆಯ ಹೊರತಾಗಿಯೂ ರಾಜ್ಯದ ಪೆಟ್ರೋಲ್, ಡೀಸೆಲ್ ಬೆಲೆ ನೆರೆಯ ರಾಜ್ಯಗಳು ಹಾಗೂ ಬಿಜೆಪಿ ಆಡಳಿತದ ರಾಜ್ಯಗಳಿಗಿಂತ ಕಡಿಮೆ ಎಂದು ವಿವರಿಸಿದರು. ಈ ಬೆಲೆ ಏರಿಕೆಯಿಂದ 3000 ಕೋಟಿ ಆದಾಯ ಬರಬಹುದು. ಗ್ಯಾರಂಟಿ ಯೋಜನೆಗಳಿಗೆ 60000 ಕೋಟಿ ಬೇಕು. ಯಾರಿಗೆ ಕೊಡುತ್ತಾ ಇದ್ದೇವೆ? ಶ್ರೀಮಂತರಿಗೆ ಕೊಡುತ್ತಾ ಇದ್ದೀವಾ?

ಅಂಬಾನಿ, ಅದಾನಿಗಳಿಗೆ ಸಾಲ ಮನ್ನಾ ಮಾಡ್ತಾ ಇದ್ದೀವಾ? ರೈತರ ಸಾಲ ಮನ್ನ ಮಾಡಿ ಎಂದರೆ ಒಂದು ರೂಪಾಯಿ ಸಾಲ ಮನ್ನಾ ಮಾಡಿಲ್ಲ. ಇವರಿಗೆ ನಮ್ಮನ್ನು ಪ್ರಶ್ನಿಸುವ ನೈತಿಕತೆ ಇದೆಯೇ ಎಂದು ಟೀಕಿಸಿದರು. ಸರ್ಕಾರ ಪಾಪರ್ ಆಗಿದೆ ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಹೇಗೆ ಹೇಳುತ್ತಾರೆ? ನಾವು ಯಾರದ್ದಾದರೂ ಸಂಬಳ ನಿಲ್ಲಿಸಿದ್ದೇವೆಯೇ? ಆಯವ್ಯಯದಲ್ಲಿ ಘೋಷಿಸಿದ ಕಾರ್ಯಕ್ರಮಗಳಿಗೆ ಅನುದಾನ ಒದಗಿಸದೇ ಸ್ಥಗಿತ ಗೊಳಿಸಿದ್ದೇವೆಯೇ ಎಂದು ಅವರು ಪ್ರಶ್ನಿಸಿದರು.ತೈಲ ಬೆಲೆ ಏರಿಕೆಯನ್ನು ಸಮರ್ಥಿಸಿಕೊಂಡ ಮುಖ್ಯಮಂತ್ರಿಯವರು, ಬೆಲೆ ಏರಿಕೆಯ ಹೊರತಾಗಿಯೂ ರಾಜ್ಯದ ಪೆಟ್ರೋಲ್, ಡೀಸೆಲ್ ಬೆಲೆ ನೆರೆಯ ರಾಜ್ಯಗಳು ಹಾಗೂ ಬಿಜೆಪಿ ಆಡಳಿತದ ರಾಜ್ಯಗಳಿಗಿಂತ ಕಡಿಮೆ ಎಂದು ವಿವರಿಸಿದರು.ನರೇಂದ್ರ ಮೋದಿ ಅವರು ಅಧಿಕಾರಕ್ಕೆ ಬಂದಾಗ ಪೆಟ್ರೋಲ್ ಮೇಲೆ ಕೇಂದ್ರ ಅಬಕಾರಿ ಸುಂಕ 9.48 ರೂಗಳಷ್ಟಿತ್ತು. 2020ರ ಮೇ ನಲ್ಲಿ 32.98 ರೂ.ಗಳಿಗೆ ಹೆಚ್ಚಾಗಿದೆ. ಈ ಮಟ್ಟದ ಏರಿಕೆ ವಿರುದ್ಧ ಬಿಜೆಪಿಯವರಾಗಲೀ, ಆರ್.ಅಶೋಕ್ ಆಗಲಿ ಬಾಯಿ ಬಿಟ್ಟಿಲ್ಲ. ಅವರಿಗೆ ಅರ್ಥ ಆಗಿದ್ದರೆ ತಾನೆ ಎಂದು ಛೇಡಿಸಿದರು. ಗೋಷ್ಠಿಯಲ್ಲಿ ಸಚಿವರಾದ ಚಲುವರಾಯಸ್ವಾಮಿ, ಬೈರತಿ ಸುರೇಶ್, ಶಾಸಕರಾದ ನರೇಂದ್ರಸ್ವಾಮಿ, ಗೋಪಾಲಕೃಷ್ಣ ಬೇಳೂರು ಸೇರಿ ಹಲವರು ಉಪಸ್ಥಿತರಿದ್ದರು.

## ನಟ ದರ್ಶನ್ ಬಂಧನದ ಬಳಿಕ ಆರೋಪಿಗಳ ಮುಖಾಮುಖಿ

ರಾಘವೇಂದ್ರ ಜತೆ ಅಪಹರಣ ಮಾಡಿದ್ದ ಅನುಕುಮಾರ್, ಈಟಿಯೋಸ್ ಕಾರು ಚಾಲಕ ರವಿ, ಲಕ್ಷ್ಮಣ್, ಜಗದೀಶ್ ಇವರುಗಳು ದರ್ಶನ್ ಅವರನ್ನು ಕಂಡಿದ್ದೆ ಪೊಲೀಸ್ ಠಾಣೆಯಲ್ಲಿ ಎಂದು ತಿಳಿದು ಬಂದಿದೆ.

ದರ್ಶನ್‌ಗಾಗಿ ರೇಣುಕಾಸ್ವಾಮಿ ಮೃತ ದೇಹ ಬಿಸಾಡಿದ್ದ ಕೇಶವ್, ಕಾರ್ತಿಕ್, ನಿಖಿಲ್ ನಾಯಕ್ ನಟ ದರ್ಶನ್ ನನ್ನು ಮೊದಲು ಭೇಟಿಯಾಗಿದ್ದು ಕೊಲೆಯಾದ ಮಾರನೇ ದಿನ ಅಂದರೆ ಮೈಸೂರಿನ ಖಾಸಗಿ ಹೋಟೆಲ್‌ನಲ್ಲಿ ಎನ್ನಲಾಗಿದೆ. ದರ್ಶನ್ ತಂಗಿದ್ದ ಮೈಸೂರಿನ ಖಾಸಗಿ ಹೋಟೆಲ್‌ಗೆ ಕೇಶವ್, ಕಾರ್ತಿಕ್, ನಿಖಿಲ್ ರನ್ನು ಕರೆದೊಯ್ದು ದೀಪಕ್ ಭೇಟಿ ಮಾಡಿಸಿದ್ದು ದೀಪಕ್ ಸೂಚನೆಯಂತೆ ರೇಣುಕಾಸ್ವಾಮಿ ಮೃತದೇಹವನ್ನು ಸುಮ್ಮನಹಳ್ಳಿ ರಾಜಕಾಲುವೆಗೆ ಬಿಸಾಡಿದ್ದರು. ನಂತರ ಕಾಮಾಕ್ಷಿಪಾಳ್ಯ ಪೊಲೀಸ್ ಠಾಣೆಗೆ ಹೋಗಿ ಹಣಕಾಸಿನ ವಿಚಾರಕ್ಕೆ ರೇಣುಕಾಸ್ವಾಮಿ ಹತ್ಯೆ ಮಾಡಿದ್ದಾಗಿ ಕೇಶವ್, ಕಾರ್ತಿಕ್, ನಿಖಿಲ್‌ನಾಯಕ್ ಶರಣಾಗಿದ್ದರು.

**ಎಲೆಕ್ಟ್ರಿಕ್ ಡಿವೈಸ್:**

ದರ್ಶನ್ ಮೇಲಿನ ಅಂಧಾಭಿಮಾನದಿಂದ ಎ5 ಆರೋಪಿ ನಂದೀಶ್ ಸ್ನೇಹಿತನನ್ನು ಭಾಗಿಯಾಗಿಸಿದ್ದಾನೆ. ಜೊತೆಗೆ ಕೆಲಸ ಮಾಡುತ್ತಿದ್ದವನ ಮಾತು ಕೇಳಿ ಎಲೆಕ್ಟ್ರಿಕ್ ಡಿವೈಸ್ ತಂದು ಸಹಾಯ ಮಾಡಿದ್ದಕ್ಕೆ ಈಗ ರಾಜು ಪ್ರಕರಣದ ಆರೋಪಿ ಪಟ್ಟಿ ಸೇರಿದ್ದಾನೆ.

ನಂದೀಶ್ ಜೊತೆ ರಾಜು ಕೇಬಲ್ ಕೆಲಸ ಮಾಡಿಕೊಂಡಿದ್ದು, ಎಲೆಕ್ಟ್ರಿಕಲ್ ಮೆಗ್ಗಾರ್ ಬಗ್ಗೆ ಆರೋಪಿಗಳು ತಿಳಿದುಕೊಂಡಿದ್ದರು.

ಪಟ್ಟಣಗೆರೆ ಶೆಡ್‌ನಲ್ಲಿ ರೇಣುಕಾಸ್ವಾಮಿಗೆ ನಂದೀಶ್ ಮತ್ತು ಇತರ ಆರೋಪಿಗಳು ಕರೆಂಟ್ ಶಾಕ್ ನೀಡುವ ಸಂಚು ಮಾಡಿ ಜೂ. 8 ರಂದು ಮೆಗ್ಗಾರ್ ಜೊತೆ ರಾಜುನನ್ನು ಪಟ್ಟಣಗೆರೆ ಶೆಡ್‌ಗೆ ನಂದೀಶ್ ಕರೆಸಿಕೊಂಡಿದ್ದ.

ಪೂರ್ವ ನಿಯೋಜಿತ ಸಂಚಿನಂತೆ ರಾಜುವಿನಿಂದ ಎಲೆಕ್ಟ್ರಿಕಲ್ ಮೆಗ್ಗಾರ್ ಯಂತ್ರವನ್ನು ನಂದೀಶ್ ತರಿಸಿಕೊಂಡಿದ್ದು,ಅದನ್ನು ಬಳಸಿ ರೇಣುಕಾಸ್ವಾಮಿಗೆ ಆರೋಪಿಗಳು ಕರೆಂಟ್ ಶಾಕ್ ನೀಡಿದ್ದರು.

**ಎಲೆಕ್ಟ್ರಿಕಲ್ ಮೆಗ್ಗರ್ ಜಪ್ತಿ:**

ಪ್ರಕರಣ ಬೆಳಕಿಗೆ ಬರುತ್ತಿದ್ದಂತೆ ರಾಜು ತಲೆ ಮರೆಸಿಕೊಂಡಿದ್ದು, ಪ್ರಕರಣದಲ್ಲಿ ರಾಜು ಪಾತ್ರ ಇರುವುದನ್ನು ಖಚಿತಪಡಿಸಿದ ಪೊಲೀಸರು ಎಫ್‌ಐಆರ್‌ನಲ್ಲಿ 9ನೇ ಆರೋಪಿಯನ್ನಾಗಿ ಹೆಸರಿಸಿದ್ದರು. ನಾಪತ್ತೆಯಾಗಿದ್ದ ಸ್ನೇಹಿತ ರಾಜುವನ್ನು ಸ್ನೇಹಿತನ ಮನೆಯಲ್ಲಿ ಪೊಲೀಸರು ಬಂಧಿಸಿದ್ದಾರೆ. ರಾಜು ಜೊತೆ ಎಲೆಕ್ಟ್ರಿಕಲ್ ಮೆಗ್ಗರ್ ಯಂತ್ರ ಕೂಡ ವಶಕ್ಕೆ ಪಡೆದು ನಡೆಸಿದ ವಿಚಾರಣೆ ವೇಳೆ ರಾಜು ತನ್ನ ಪಾತ್ರವನ್ನು ವಿವರಿಸಿದ್ದಾನೆ.

## ಶೀಘ್ರ ಕುಡಿಯುವ ನೀರಿನ ದರ ಏರಿಕೆ

ಬೆಂಗಳೂರು ಜಲಮಂಡಳಿ ಕಳೆದ 10 ವರ್ಷದಿಂದ ನೀರಿನ ದರ ಹೆಚ್ಚಳ ಮಾಡಿಲ್ಲ. ಹಾಗಾಗಿ. ದರ ಏರಿಕೆಗೆ ಪ್ರಸ್ತಾವನೆಯನ್ನು ಸಲ್ಲಿಸಿದೆ. ಈ ಹಿಂದೆ ಲೋಕಸಭಾ ಚುನಾವಣೆಯ ಮುನ್ನವೆ ಜಲಮಂಡಳಿ ದರ ಏರಿಕೆಗೆ ಮುಂದಾಗಿತ್ತಾದರೂ ಲೋಕಸಭಾ ಚುನಾವಣೆಯ ನಂತರ ಈ ಬಗ್ಗೆ ನಿರ್ಧಾರ ಕೈಗೊಳ್ಳಲು ಸರ್ಕಾರ ದರ ಏರಿಕೆಗೆ ಒಪ್ಪಿರಲಿಲ್ಲ. ಈಗ ಲೋಕಸಭಾ ಚುನಾವಣೆ ಮುಗಿದಿದ್ದು, ಪೆಟ್ರೋಲ್-ಡೀಸಲ್ ಮಾರಾಟ ತೆರಿಗೆಯನ್ನು ಸರ್ಕಾರ ಹೆಚ್ಚಳ ಮಾಡಿದ್ದು, ಕುಡಿಯುವ ನೀರನ ದರವನ್ನು ಹೆಚ್ಚಳ ಮಾಡಲಿದೆ ಎಂದು ಹೇಳಲಾಗಿದೆ.ಬೆಂಗಳೂರು ಜಲಮಂಡಳಿ ಗೃಹ ಬಳಕೆ, ವಾಣಿಜ್ಯ ಬಳಕೆ ಸೇರಿದಂತೆ ನೀರಿನ ದರವನ್ನು ಶೇ. 40 ರಷ್ಟು ಹೆಚ್ಚಳ ಮಾಡುವ ಪ್ರಸ್ತಾವ ಸರ್ಕಾರಕ್ಕೆ ಸಲ್ಲಿಸಿದೆ. ಸರ್ಕಾರ ಇದಕ್ಕೆ ಒಪ್ಪಿದರೆ ನೀರಿನ ದರ ದುಬಾರಿಯಾಗಲಿದೆ.

## ಪ್ರತಿಭಟಿಸಲು ನೈತಿಕತೆಯಿಲ್ಲ:ಬಿಜೆಪಿ ವಿರುದ್ಧ ಸಿಎಂ ಗುಡುಗು

ಆರ್. ಅಶೋಕ್ ಅವರಿಗೆ ಆರ್ಥಿಕತೆಯೇ ಗೊತ್ತಿಲ್ಲ ಎಂದು ಟೀಕಿಸಿದರು.

ರಾಜ್ಯ ಸರ್ಕಾರ ಪಾಪರ್ ಆಗಿದೆ ಎಂದೆಲ್ಲಾ ಬಿಜೆಪಿ ನಾಯಕರು ಮಾತನಾಡುತ್ತಿರುವುದಕ್ಕೂ ಆಕ್ರೋಶ ವ್ಯಕ್ತಪಡಿಸಿದ ಅವರು, ಪಾಪರ್ ಎಂದರೆ ಏನು ಬಿಜೆಪಿಯವರಿಗೆ ಗೊತ್ತಾ, ನಾವು ಸಂಬಳ ನಿಲ್ಲಿಸಿದ್ದೇವಾ, ಅಭಿವೃದ್ಧಿ ಕಾರ್ಯಗಳಿಗೆ ಅನುದಾನ ಕೊಡುತ್ತಿಲ್ಲವೇ, ಹೀಗಿದ್ದರೂ ರಾಜ್ಯ ಸರ್ಕಾರ ಪಾಪರ್ ಎಂಬ ಅರ್ಥಹೀನ ಹೇಳಿಕೆಗಳನ್ನು ಬಿಜೆಪಿ ನೀಡುತ್ತಿರುವುದರ ವಿರುದ್ಧ ಅವರು ಹರಿಹಾಯ್ದರು.

ಬಿಜೆಪಿಯವರು ಬಡವರ ವಿರೋಧಿಗಳು, ಗ್ಯಾರಂಟಿ ಯೋಜನೆಗಳನ್ನು ಬಡವರಿಗೆ ಕೊಟ್ಟಿರುವುದಕ್ಕೆ ಹೀಗೆಲ್ಲಾ ಮಾತನಾಡುತ್ತಿದ್ದಾರೆ. ಬಡವರ ಹೊಟ್ಟೆ ಮೇಲೆ ಹೊಡೆಯುವುದೇ ಬಿಜೆಪಿಯವರ ಕೆಲಸ ಎಂದು ವಾಗ್ದಾಳಿ ನಡೆಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಗ್ಯಾರಂಟಿ ಯೋಜನೆಗಳನ್ನು ನಾವು ಬಡವರಿಗೆ ಕೊಟ್ಟಿದ್ದೇವೆ, ಶ್ರೀಮಂತರಿಗಲ್ಲ. ಪ್ರಧಾನಿ ಮೋದಿಯವರ ರೀತಿ ಅಂಬಾನಿ, ಅದಾನಿಯವರ ಸಾಲ ಮನ್ನಾ ಮಾಡಿಲ್ಲ. ರೈತರ ಸಾಲ ಮನ್ನಾ ಮಾಡಿ ಎಂದರೆ ಆಗಲ್ಲ ಎನ್ನುವ ಬಿಜೆಪಿಯವರು ನಮಗೆ ಪಾಠ ಮಾಡಲು ಬರುತ್ತಾರೆ ಎಂದು ಆಕ್ರೋಶ ಹೊರ ಹಾಕಿದರು.

ಕೇಂದ್ರದಿಂದ ರಾಜ್ಯಕ್ಕೆ ಆಗಿರುವ ತೆರಿಗೆ ಪಾಲಿನ ಅನ್ಯಾಯ, ಬರ ಪರಿಹಾರ ನೀಡಿಕೆಯಲ್ಲಿನ ವಿಳಂಬ ಯಾವುದರ ಬಗ್ಗೆಯೂ ಚಕಾರವೆತ್ತದ ಬಿಜೆಪಿಯವರು ಈಗ ನಮ್ಮ ವಿರುದ್ಧ ಪ್ರತಿಭಟನೆ ನಡೆಸುತ್ತಿದ್ದಾರೆ. ಇವರಿಗೆ ಧೈರ್ಯ ಇದ್ದರೆ ನಮ್ಮ ತೆರಿಗೆ ನಮ್ಮ ಹಕ್ಕು ಹೋರಾಟದಲ್ಲಿ ಭಾಗಿಯಾಗಿ ರಾಜ್ಯಕ್ಕೆ ನ್ಯಾಯ ಒದಗಿಸಲಿ ಎಂದು ಮುಖ್ಯಮಂತ್ರಿಗಳು ಸವಾಲು ಹಾಕಿದರು.

ಪೆಟ್ರೋಲ್, ಡೀಸೆಲ್ ದರ ಏರಿಕೆಯಿಂದ ಅಭಿವೃದ್ಧಿ ಕಾರ್ಯಗಳಿಗೆ ಸ್ವಲ್ಪಮಟ್ಟಿಗೆ ಹೆಚ್ಚಿನ ಹಣ ಸಂಗ್ರಹವಾಗುತ್ತದೆ. ಹಾಗಾಗಿ ಬೇರೆ ರಾಜ್ಯಗಳಿಗಿಂತ ಕಡಿಮೆ ಪ್ರಮಾಣದಲ್ಲಿ ತೆರಿಗೆ ಏರಿಕೆ ಮಾಡಿದ್ದೇವೆ. ಬಿಜೆಪಿ ಆಡಳಿತ ಇರುವ ಮಹಾರಾಷ್ಟ್ರ, ರಾಜಸ್ಥಾನ, ಮಧ್ಯಪ್ರದೇಶ, ಗುಜರಾತ್‌ನಲ್ಲಿ ರಾಜ್ಯಕ್ಕಿಂತಲೂ ತೆರಿಗೆ ಮತ್ತು ಡೀಸೆಲ್ ದರ ಹೆಚ್ಚಿದೆ. ಅಲ್ಲಿ ಕಡಿಮೆ ಮಾಡಲಿ. ಆಮೇಲೆ ನಮ್ಮ ವಿರುದ್ಧ ಹೋರಾಟ ಮಾಡಲಿ ಎಂದು ವ್ಯಂಗ್ಯವಾಡಿದರು.

## ರೇಣುಕಾ ಸ್ವಾಮಿ ಹತ್ಯೆ: ನಟ ಚಿಕ್ಕಣ್ಣನಿಗೆ ಸಂಕಷ್ಟ

ಸ್ಟೋನಿ ಬ್ರೂಕ್ ಪಬ್ ನಲ್ಲಿ ಏನಾದರೂ ಚರ್ಚೆಯಾಗಿದ್ದರ ಮಾಹಿತಿ ಪಡೆಯುವ ಸಲುವಾಗಿ ಹಾಸ್ಯ ನಟ ಚಿಕ್ಕಣ್ಣನಿಗೆ ನೋಟಿಸ್ ಕೊಟ್ಟು ಕರೆಸಿ ವಿಚಾರಣೆ ನಡೆಸಲು ತನಿಖಾಧಿಕಾರಿಗಳು ಹಿರಿಯ ಅಧಿಕಾರಿಗಳ ಸಲಹೆಯನ್ನು ಪಡೆದಿದ್ದಾರೆ.

ಸದ್ಯ ಚಿಕ್ಕಣ್ಣನನ್ನು ಸಾಕ್ಷಿಯಾಗಿ ಪರಿಗಣಿಸಲು ಪೊಲೀಸರು ಮುಂದಾಗಿದ್ದು, ಈ ಬಗ್ಗೆ ಚಿಂತನೆ ನಡೆಸಲಾಗಿದೆ, ಕೊಲೆಯ ಬಗ್ಗೆ ಮಾಹಿತಿ ಇಲ್ಲದೆ ಇದ್ದರೂ ಕೂಡ, ಪಾರ್ಟಿಯಲ್ಲಿದ್ದ ಎಂಬ ಕಾರಣಕ್ಕೆ ಸಾಕ್ಷಿಯಾಗಿ ಪರಿಗಣನೆ ಮಾಡಿಕೊಳ್ಳಲು ಹಿರಿಯ ಪೊಲೀಸ್ ಅಧಿಕಾರಿಗಳ ಜೊತೆ ಪೊಲೀಸರು ಚರ್ಚೆ ನಡೆಸುತ್ತಿದ್ದಾರೆ. ಇನ್ನು ಘಟನೆ ನಡೆಯುವ ಮುನ್ನವೇ ಪಾರ್ಟಿ ಮುಗಿಸಿ ಚಿಕ್ಕಣ್ಣ ತೆರಳಿದ್ದರು.

**ದರ್ಶನ್ ಸಹಚರ ಸೆರೆ:**

ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣ ಸಂಬಂಧ ನಟ ದರ್ಶನ್‌ನ ಮತ್ತೊಬ್ಬ ಸಹಚರ ಧನರಾಜ್ ಅಲಿಯಾಸ್ ರಾಜ ಎಂಬಾತನನ್ನು ಕಾಮಾಕ್ಷಿಪಾಳ್ಯ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಪಟ್ಟಣಗೆರೆಯ ಶೆಡ್‌ನಲ್ಲಿ ಅಂದು ರೇಣುಕಾಸ್ವಾಮಿ ಮೇಲೆ ನಡೆದ ಹಲ್ಲೆ ವೇಳೆ ಧನರಾಜ್ , ದರ್ಶನ್ ಜತೆಗಿದ್ದು,ಈತನೂ ಸಹ ರೇಣುಕಾಸ್ವಾಮಿ ಮೇಲೆ ಹಲ್ಲೆ ಮಾಡಿದ್ದ ರೇಣುಕಾಸ್ವಾಮಿ ಮೃತಪಟ್ಟ ಹಿನ್ನೆಲೆಯಲ್ಲಿ ತಲೆಮರೆಸಿಕೊಂಡಿದ್ದು ಪವಿತ್ರಾ ಗೌಡ ಮನೆಯಲ್ಲಿ ಕೆಲಸಕ್ಕಿದ್ದ ಆತನನ್ನು ಬಂಧಿಸಲಾಗಿದೆ.

## ಬಜೆಟ್ ಮಂಡನೆಗೆ ನಿರ್ಮಲಾ ಸಿದ್ಧತೆ

ಆರ್ಥಿಕ ಬೆಳವಣಿಗೆಯ ಜೊತೆಗೆ ಎನ್‌ಡಿಎ ಸಮ್ಮಿಶ್ರ ಸರ್ಕಾರದ ಬೇಡಿಕೆಗಳನ್ನು ಪೂರೈಸಲು ಸಂಪನ್ಮೂಲಗಳನ್ನು ಹುಡುಕಬೇಕಾಗಿದೆ. ಜೊತೆಗೆ ಈ ಬಾರಿ ಬಜೆಟ್ ಮಂಡನೆ ಮತ್ತು ಸಿದ್ಧತೆಗೆ ಎರಡು ಪ್ರಮುಖ ಮಿತ್ರಪಕ್ಷಗಳಾದ ಜೆಡಿಯು ಮತ್ತು ಟಿಡಿಪಿ ಜೊತೆ ಸಮಾಲೋಚನೆ ನಡೆಸುವುದು ಅತಿ ಮುಖ್ಯವಾಗಿದೆ. ಆರ್ಥಿಕ ಕಾರ್ಯಸೂಚಿಯು ಮುಂದಿನ ದಿನಗಳಲ್ಲಿ ಭಾರತದ ಆರ್ಥಿಕತೆಯನ್ನು 5 ಟ್ರಿಲಿಯನ್ ಡಾಲರ್ ತಲುಪಿಸುವ ಗುರಿ ಹೊಂದಲಾಗಿದೆ, ಇದರ ಜೊತೆಗೆ 2047 ರ ವೇಳೆಗೆ ದೇಶವನ್ನು 'ವಿಕಸಿತ ಭಾರತ್' ಆಗಿ ಪರಿವರ್ತಿಸಲು ವೇಗದ ಸುಧಾರಣಾ ಕ್ರಮ ಕೈಗೊಳ್ಳುವ ಸಾಧ್ಯತೆ ಇದೆ. ಆರ್‌ಬಿಐನಿಂದ 2.11 ಲಕ್ಷ ಕೋಟಿ ರೂ. ಡಿವಿಡೆಂಡ್: ಆರ್‌ಬಿಐ ಅಂದಾಜಿನ ಪ್ರಕಾರ, ಗ್ರಾಮೀಣ ಬೇಡಿಕೆಯನ್ನು ಸುಧಾರಿಸುವುದು ಮತ್ತು ಹಣದುಬ್ಬರ ಮಿತಗೊಳಿಸುವುದರ ಮೂಲಕ ಭಾರತದ ಆರ್ಥಿಕತೆಯು ಪ್ರಸಕ್ತ ಹಣಕಾಸು ವರ್ಷದಲ್ಲಿ ಶೇಕಡಾ 7.2ರಷ್ಟು ಬೆಳವಣಿಗೆ ಹೊಂದಿದೆ ಎಂದು ಅಂದಾಜಿಸಲಾಗಿದೆ.ಪ್ರಧಾನಿ ನರೇಂದ್ರ ಮೋದಿ 3.0 ಸರ್ಕಾರದ ಹಣಕಾಸಿನ ಹಿಡಿತ ಹೊಂದಿರುವ ಬಲವಾದ ಆರ್ಥಿಕತೆ ತನ್ನದಾಗಿಸಿಕೊಳ್ಳಲು ಯೋಜನೆಗಳನ್ನು ರೂಪಿಸುತ್ತದೆ. ಹಣಕಾಸು ವರ್ಷ 2024ರಲ್ಲಿ ಆಬಿಐನಿಂದ 2.11 ಲಕ್ಷ ಕೋಟಿ ರೂ. ಅತ್ಯಧಿಕ ಡಿವಿಡೆಂಡ್ ನೀಡಿರುವುದು ಕೂಡ ಸರ್ಕಾರಕ್ಕೆ ಆನೆ ಬಲಬಂದಂತಾಗಲಿದೆ,

**ಪ್ರಮುಖ ನೀತಿ ಮುಂದುವರಿಕೆ:**

ಬಿಜೆಪಿ ಸರ್ಕಾರದ ಅವಧಿಯಲ್ಲಿ ಕೈಗೆತ್ತಿಕೊಂಡಿದ್ದ ಪ್ರಮುಖ ನೀತಿಗಳನ್ನು ಮೂರನೇ ಅವಧಿಯ ಎನ್‌ಡಿಎ ಸರ್ಕಾರದಲ್ಲಿ ಮುಂದುವರಿಸುವ ಸಾಧ್ಯತೆ ಇದೆ

ಕೃಷಿ ವಲಯದಲ್ಲಿನ ಒತ್ತಡ ನಿಭಾಯಿಸುವುದು, ಉದ್ಯೋಗ ಸೃಷ್ಟಿ, ಕ್ಯಾಪೆಕ್ಸ್ ಆವೇಗವನ್ನು ಉಳಿಸಿಕೊಳ್ಳುವುದು ಮತ್ತು ಹಣಕಾಸಿನ ಬಲವರ್ಧನೆಯ ಹಾದಿಯಲ್ಲಿ ಉದ್ಯೋಗಿಗಳ ಆದಾಯದ ಬೆಳವಣಿಗೆ ಪ್ರಾರಂಭಿಸುವ ಆದ್ಯತೆ ಮತ್ತು ಗುರಿ ಹೊಂದಲಾಗಿದೆ.

## ಸಂಪನ್ಮೂಲ ಕ್ರೋಢಿಕರಣಕ್ಕಾಗಿ ಬೆಲೆ ಹೆಚ್ಚಳ: ಪರಮೇಶ್ವರ

ಇವರೆಲ್ಲ ಎಲ್ಲಿದ್ದರು. ಬಿಜೆಪಿಯವರು ಪ್ರತಿಭಟನೆ ಮಾಡುವುದಕ್ಕು ಮುನ್ನ ಇದನ್ನು ಯೋಚಿಸಲಿ. ಅಭಿವೃದ್ಧಿ ಕಾರ್ಯಗಳಾಗಬೇಕು ಎಂಬ ಉದ್ದೇಶದಿಂದ ಬೆಲೆ ಹೆಚ್ಚಿಸಲಾಗಿದೆ. ಗ್ಯಾರಂಟಿ ಯೋಜನೆಗಳಿಗೋಸ್ಕರ ಬೆಲೆ ಏರಿಕೆ ಮಾಡಿದ್ದಾರೆ ಎಂದು ವ್ಯಾಖ್ಯಾನ ಮಾಡುವುದು ಸರಿಯಲ್ಲ ಎಂದು ಬೇಸರಿಸಿದರು.

ಅಧಿಕಾರಕ್ಕೆ ಬಂದಾಗ ಪೆಟ್ರೋಲ್, ಡೀಸೆಲ್, ಗ್ಯಾಸ್ ಬೆಲೆ ಕಡಿಮೆ ಮಾಡುತ್ತೇವೆ ಎಂದು ಸಿಎಂ ಭರವಸೆ ಕೊಟ್ಟಿರುವ ವೀಡಿಯೋ ಬಿಡುಗಡೆ ಮಾಡಿರುವ ಕುರಿತು ಪ್ರತಿಕ್ರಿಯಿಸಿದ ಅವರು, ನಾನು ಇವತ್ತು ಒಂದು ಮಾತನ್ನು ಹೇಳುತ್ತೇನೆ. ಆ ಮಾತು ಶಾಶ್ವತವಾಗಿ ಉಳಿದು ಹೋಗುತ್ತದೆಯೇ? ಸಂದರ್ಭಕ್ಕೆ ಅನುಸಾರವಾಗಿ ಆಡಳಿತ ಮಾಡಬೇಕಲ್ಲವೇ? ಎಂದರು.

ರೇಣುಕಾಸ್ವಾಮಿ ಹತ್ಯೆ ಪ್ರಕರಣದ ತನಿಖೆಯ ಕುರಿತು ಪ್ರತಿಕ್ರಿಯಿಸಿ, ತನಿಖೆ ಆಗುವವರೆಗೂ ಬಹಿರಂಗವಾಗಿ ಜನರ ಮುಂದೆ ಹೇಳಿಕೆ ನೀಡಲು ಆಗುವುದಿಲ್ಲ. ತನಿಖೆ ಆದ ನಂತರ ವರದಿ ಬರುತ್ತದೆ. ಕಾನೂನು ಪ್ರಕಾರ ಕ್ರಮ ತೆಗೆದುಕೊಳ್ಳುತ್ತಾರೆ. ಯಾವುದೇ ಮುಲಾಜಿಲ್ಲದೇ ಕ್ರಮ ತೆಗೆದುಕೊಳ್ಳಲಾಗುತ್ತದೆ ಎಂದು ನಾನು ಹೇಳಿದ್ದೀನಿ, ಮುಖ್ಯಮಂತ್ರಿಯವರು ಹೇಳಿದ್ದಾರೆ. ಯಾರನ್ನೇ ರಕ್ಷಣೆ ಮಾಡುವುದಾಗಲಿ, ಯಾರ ಬಗ್ಗೆಯೂ ಮೃದು ಧೋರಣೆ ತೋರುವುದಾಗಲಿ ಇಲ್ಲ. ಯಾವ ಒತ್ತಡಕ್ಕೂ ನಾವು ಮಣಿಯುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಇನ್‌ಸ್ಪೆಕ್ಟರ್ ಗಿರೀಶ್ ನಾಯ್ಕ್ ಮರುನೇಮಕ ಕುರಿತು ಮಾತನಾಡಿ, ಆಡಳಿತಾತ್ಮಕವಾಗಿ ಏನು ಅಗತ್ಯ ಇದೆಯೋ ಅದನ್ನು ಮಾಡುತ್ತೇವೆ. ಕೆಲ ಸಂದರ್ಭಗಳಲ್ಲಿ ತನಿಖಾಧಿಕಾರಿಗಳನ್ನು ಬದಲಾಯಿಸಿದ್ದೇವೆ. ಸಮರ್ಥವಾದ ಅಧಿಕಾರಿ ಯಾರು ಇದ್ದಾರೆ ಎಂಬುದನ್ನು ಪರಿಗಣಿಸಿ, ಇಲಾಖೆಯ ಹಿರಿಯ ಅಧಿಕಾರಿಗಳೇ ಮರುನೇಮಕ ಮಾಡಿಕೊಳ್ಳುತ್ತಾರೆ. ನಾವ್ಯಾರು ಸೂಚನೆ ಕೊಡುವುದಿಲ್ಲ ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್, ಬಿಬಿಎಂಪಿ ಚುನಾವಣೆಗೆ ತಯಾರಿ ಮಾಡಿಕೊಳ್ಳುವಂತೆ ಪಕ್ಷದ ಅಧ್ಯಕ್ಷರು ಹೇಳಿದ್ದಾರೆ. ಮೀಸಲಾತಿ ಸಂಪೂರ್ಣ ಮಾಡಬೇಕು. ಮೀಸಲಾತಿ ಸರಿಯಿಲ್ಲ ಎಂದು ಯಾರಾದರು ಕೋರ್ಟ್‌ಗೆ ಹೋಗಬಹುದು. ಇದಾಗದಂತೆ ನೋಡಿಕೊಳ್ಳಬೇಕಿದೆ ಎಂದರು.

ಮಧುಗಿರಿಯ ಚಿನ್ನೇನಹಳ್ಳಿಯಲ್ಲಿ ಕಲುಷಿತ ನೀರು ಸೇವನೆ ಘಟನೆಯ ತಪ್ಪಿತಸ್ಥ ಅಧಿಕಾರಿಗಳ ವಜಾ ಮಾಡಬೇಕು ಎಂದು ಅಶೋಕ್ ಆಗ್ರಹಿಸಿರುವ ಕುರಿತ ಪ್ರಶ್ನೆಗೆ ಪ್ರತಿಕ್ರಿಯಿಸಿ, ಯಾರು ಅದರಲ್ಲಿ ನೇರವಾಗಿ ಭಾಗಿಯಾಗಿರುತ್ತಾರೆ ಅವರನ್ನು ಅಮಾನತು ಮಾಡಬೇಕಾಗುತ್ತದೆ. ಈಗಾಗಲೇ ಗ್ರಾಮ ಪಂಚಾಯಿತಿ ಪಿಡಿಓ, ಕಾರ್ಯದರ್ಶಿ, ವಾಟರ್‌ಮೆನ್‌ನನ್ನು ಅಮಾನತು ಮಾಡಲಾಗಿದೆ. ತನಿಖೆಯಲ್ಲಿ ಹಿರಿಯ ಅಧಿಕಾರಿಗಳ ಲೋಪ ಕಂಡು ಬಂದರೆ ಅವರನ್ನು ಅಮಾನತು ಮಾಡುತ್ತೇವೆ ಎಂದು ಸ್ಪಷ್ಟಪಡಿಸಿದರು.

## ಪೋಕ್ಸೊ ಪ್ರಕರಣ:ಸಿಐಡಿ ಎದುರು ಬಿಎಸ್‌ವೈ ವಿಚಾರಣೆಗೆ ಹಾಜರು ಹೇಳಿಕೆ ದಾಖಲು

ಆಗಮಿಸಿದ್ದು, ವಕೀಲರ ಜತೆ ಯಡಿಯೂರಪ್ಪ ಹಾಗೂ ವಿಜಯೇಂದ್ರ ಅವರು ಚರ್ಚೆ ನಡೆಸಿದರು.

ಸುಮಾರು ಹನ್ನೊಂದು ಗಂಟೆಗೆ ವಕೀಲ ಸಂದೀಪ್ ಪಾಟೀಲ್ ಜೊತೆಗೆ ಯಡಿಯೂರಪ್ಪ ಸಿಐಡಿ ಕಚೇರಿಗೆ ಆಗಮಿಸಿ ವಿಚಾರಣೆ ಎದುರಿಸಿದರು.

**ಹೈಕೋರ್ಟ್ ರಿಲೀಫ್:**

ಬಂಧನದ ಭೀತಿಯಲ್ಲಿದ್ದ ಬಿಎಸ್‌ವೈ ಅವರಿಗೆ ಕರ್ನಾಟಕ ಹೈಕೋರ್ಟ್ ಬಿಗ್ ರಿಲೀಫ್ ನೀಡಿತ್ತು. ಹೈಕೋರ್ಟ್‌ನ ಮುಂದಿನ ವಿಚಾರಣೆವರೆಗೆ ಬಿ.ಎಸ್.ಯಡಿಯೂರಪ್ಪ ಅವರನ್ನು ಬಂಧಿಸಬಾರದು ಎಂದು ಕರ್ನಾಟಕ ಹೈಕೋರ್ಟ್‌ನ ನ್ಯಾಯಮೂರ್ತಿ ಕೃಷ್ಣ ದೀಕ್ಷಿತ್ ಅವರ ಏಕಸದಸ್ಯ ಪೀಠವು ಆದೇಶ ಹೊರಡಿಸಿತ್ತು. ಇದರಿಂದಾಗಿ, ಸಿಐಡಿ ಅಧಿಕಾರಿಗಳಿಂದ ಬಂಧನದ ಭೀತಿಯಲ್ಲಿ ಯಡಿಯೂರಪ್ಪ ಅವರಿಗೆ ರಿಲೀಫ್ ಸಿಕ್ಕಿದೆ. ಆದರೆ, ಜೂನ್ 17ರಂದು ಸಿಐಡಿ ಅಧಿಕಾರಿಗಳ ಎದುರು ವಿಚಾರಣೆಗೆ ಹಾಜರಾಗಬೇಕು ಎಂದು ಯಡಿಯೂರಪ್ಪ ಅವರಿಗೆ ಕೋರ್ಟ್ ಸೂಚಿಸಿತ್ತು.

ಪ್ರಕರಣದಲ್ಲಿ ವಾದ-ಪ್ರತಿವಾದ ಆಲಿಸಿದ ನ್ಯಾಯಾಲಯವು "ಬಿ.ಎಸ್. ಯಡಿಯೂರಪ್ಪ ಅವರು ಮಾಜಿ ಮುಖ್ಯಮಂತ್ರಿಯಾಗಿದ್ದಾರೆ. ಅವರು ಜೂನ್ 17ರಂದು ವಿಚಾರಣೆಗೆ ಹಾಜರಾಗುವುದಾಗಿ ತಿಳಿಸಿದ್ದರೂ ಕೋರ್ಟ್ ಹೋಗಿ ಅರೆಸ್ಟ್ ವಾರಂಟ್ ತಂದಿದ್ದೀರಿ. ನಾಲ್ಕು ದಿನ ತಡವಾಗಿ ವಿಚಾರಣೆಗೆ ಹಾಜರಾಗಿದ್ದರೆ ಆಕಾಶವೇನೂ ಕಳಚಿ ಬೀಳುತ್ತಿರಲಿಲ್ಲ. ಹಾಗಾಗಿ, ಅರೆಸ್ಟ್ ವಾರಂಟ್ ಬಗ್ಗೆ ನಮಗೆ ಅನುಮಾನವಿದೆ. ಮುಂದಿನ ವಿಚಾರಣೆವರೆಗೂ ಯಡಿಯೂರಪ್ಪ ಅವರನ್ನು ಬಂಧಿಸಬಾರದು" ಎಂಬುದಾಗಿ ಏಕಸದಸ್ಯ ಪೀಠವು ಆದೇಶ ಹೊರಡಿಸಿತ್ತು.

**ಏನಿದು ಪ್ರಕರಣ:**

2024ರ ಫೆಬ್ರವರಿ 2ರಂದು ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ಅವರು 17 ವರ್ಷದ ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ ಎಂದು ಮಾರ್ಚ್ 14ರಂದು ಪೋಕ್ಸೊ ಕಾಯ್ದೆ ಅಡಿಯಲ್ಲಿ ಸದಾಶಿವನಗರ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಲಾಗಿತ್ತು. ಇದಾದ ಬಳಿಕ ಬಿ.ಎಸ್.ಯಡಿಯೂರಪ್ಪ ಅವರು ಸಿಐಡಿ ಅಧಿಕಾರಿಗಳ ವಿಚಾರಣೆಗೂ ಹಾಜರಾಗಿದ್ದರು. ಆದರೆ, ಎಫ್‌ಐಆರ್ ದಾಖಲಾದ ಮೂರು ತಿಂಗಳ ಬಳಿಕ ಪ್ರಕರಣವೀಗ ಮತ್ತೆ ಮುನ್ನೆಲೆಗೆ ಬಂದಿದೆ. ಜೂನ್ 12ರಂದೇ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಚಾರಣೆಗೆ ಹಾಜರಾಗಬೇಕು ಎಂಬುದಾಗಿ ಜೂನ್ 11ರಂದೇ ಸಿಐಡಿ ಅಧಿಕಾರಿಗಳು ನೋಟಿಸ್ ನೀಡಿದ್ದರು.

**ಬಿಎಸ್‌ವೈ ಬಾಕ್ಸ್ ಪುನೀತ್ ತನಿಖಾಧಿಕಾರಿ:**

ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ವಿರುದ್ಧದ ಪೋಕ್ಸೊ ಪ್ರಕರಣ ಕುರಿತಂತೆ ತನಿಖಾಧಿಕಾರಿಯನ್ನಾಗಿ ಡಿವೈಎಸ್ಪಿ ಪುನೀತ್ ಅವರನ್ನು ನೇಮಕ ಮಾಡಲಾಗಿದೆ. ಈ ಮೊದಲು ಸಿಐಡಿಗೆ ವರ್ಗಾವಣೆಗೊಂಡ ಬಳಿಕ ಡಿವೈಎಸ್ಪಿ ಪೃಥ್ವಿ ಅವರನ್ನು ತನಿಖಾಧಿಕಾರಿಯನ್ನಾಗಿ ನೇಮಕ ಮಾಡಲಾಗಿತ್ತು. ಈಗ ಪೃಥ್ವಿ ಅವರು ಸಿಐಡಿಯಿಂದ ವರ್ಗಾವಣೆಗೊಂಡ ಹಿನ್ನೆಲೆಯಲ್ಲಿ ಪ್ರಕರಣದ ತನಿಖಾಧಿಕಾರಿಯನ್ನಾಗಿ ಡಿವೈಎಸ್ಪಿ ಪುನೀತ್ ನೇಮಕಗೊಂಡಿದ್ದಾರೆ. ಈಗ ಯಡಿಯೂರಪ್ಪರವರನ್ನು ವಿಚಾರಣೆ ನಡೆಸಲಿದ್ದಾರೆ.

## ಬೇರೆ ರಾಜ್ಯಗಳಿಗೆ ಹೋಲಿಕೆ ಮಾಡುವುದು ರಾಜ್ಯದ ಜನತೆಗೆ ಮಾಡುವ ದ್ರೋಹ

ಸರಣಿ ಟ್ವೀಟ್ ಮಾಡಿರುವ ಅವರು, ಗ್ಯಾರೆಂಟಿ ಗಳ ಹೆಸರಿನಲ್ಲಿ ರಾಜ್ಯದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಗಳು ನಡೆಯದೇ ರಾಜ್ಯದ ಪ್ರಗತಿ ಶೂನ್ಯವಾಗಿದೆ. ರಾಜ್ಯ ಆರ್ಥಿಕವಾಗಿ ದಿವಾಳಿಯಾಗಿದ್ದು ಇದನ್ನು ಸರಿಪಡಿಸಲು ಹಲವಾರು ವರ್ಷ ಬೇಕು. ಇದಕ್ಕೆ ರಾಜ್ಯ ಕಾಂಗ್ರೆಸ್ ಸರ್ಕಾರವೇ ನೇರ ಹೊಣೆಯಾಗಿದೆ ಎಂದು ಹೇಳಿದ್ದಾರೆ. ಸಾಮಾನ್ಯರ ಮೇಲೆ ಹೊರೆ ಹಾಕಿ ಬೇರೆ ರಾಜ್ಯಗಳಿಗೆ ವ್ಯಾಪಾರ ತೊಂದರೆಯಾಗುತ್ತದೆ ಎಂದು ಹೇಳಿ ಪಕ್ಕದ ರಾಜ್ಯಗಳ ಮಿತ್ರ ಪಕ್ಷಗಳ ಹಿತ ಕಾಯುವ ಮೂಲಕ ರಾಜ್ಯದ ಜನತೆಗೆ ದ್ರೋಹ ಮಾಡುತ್ತಿರುವುದು ರಾಜದ್ರೋಹ ಮಾಡಿದಂತೆ. ಬೇರೆ ರಾಜ್ಯಗಳಿಗೆ ಹೋಲಿಕೆ ಮಾಡಿದರೆ ರಾಜ್ಯದಲ್ಲಿ ಪೆಟ್ರೋಲ್, ಡಿಸೇಲ್ ದರ ಕಡಿಮೆ ಇದೆ ಎಂದು ಬಡವರ ಮೇಲೆ ಭಾರ ಹಾಕುವುದು ಯಾವ ನ್ಯಾಯ ? ದರ ಏರಿಕೆ ಮಾಡಿ ಸಮರ್ಥನೆ ಮಾಡಿಕೊಳ್ಳುತ್ತಿರುವ ಮುಖ್ಯಮಂತ್ರಿಯವರ ಹೇಳಿಕೆ ಜನ ವಿರೋಧಿಯಾಗಿದೆ ಎಂದು ಹೇಳಿದ್ದಾರೆ. ಉಚಿತ ಗ್ಯಾರೆಂಟಿ ಕೊಡುತ್ತಿರುವುದಾಗಿ ಹೇಳಿ ಬಡವರ ಮೇಲೆ ತೆರಿಗೆ ಹಾಕಿ ಅವರಿಂದಲೇ ಹಣ ಸುಲಿದು ಕಾಂಗ್ರೆಸ್ ತನ್ನ ರೊಟ್ಟಿ ಸುಟ್ಟುಕೊಂಡು ರಾಜಕೀಯ ಲಾಭ ಮಾಡಿಕೊಳ್ಳುವುದು ಯಾವ ನ್ಯಾಯ ಎಂದು ಪ್ರಶ್ನಿಸಿದ್ದಾರೆ.

## ತೈಲ ದರ ಏರಿಕೆ ಖಂಡಿಸಿ ಬಿಜೆಪಿ ಪ್ರತಿಭಟನೆ

ದರ ಏರಿಕೆಯನ್ನು ವಾಪಸ್ ಪಡೆಯಬೇಕು ಎಂದು ಪ್ರತಿಭಟನಾನಿರತ ಬಿಜೆಪಿ ಕಾರ್ಯಕರ್ತರು ಆಗ್ರಹಿಸಿದರು.

ಇದು ಜನ ವಿರೋಧಿ ಸರ್ಕಾರ

ಪೆಟ್ರೋಲ್-ಡೀಸಲ್ ದರ ಏರಿಕೆ ವಿರೋಧಿಸಿ ಬಿಜೆಪಿ ಪ್ರತಿಭಟನೆಗೂ ಮುನ್ನ ಡಾಲರ್ಸ್ ಕಾಲೋನಿಯ ಯಡಿಯೂರಪ್ಪರವರ ನಿವಾಸದ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಅವರು ರಾಜ್ಯದ ಕಾಂಗ್ರೆಸ್ ಸರ್ಕಾರ ಜನವಿರೋಧಿ ಸರ್ಕಾರ ಎಂದು ವಾಗ್ದಾಳಿ ನಡೆಸಿದರು.

ಪೆಟ್ರೋಲ್-ಡೀಸಲ್ ಬೆಲೆ ಏರಿಕೆ ಜನಸಾಮಾನ್ಯರಿಗೆ ಹೊರೆಯಾಗುತ್ತದೆ. ಕೂಡಲೇ ಮುಖ್ಯಮಂತ್ರಿ ಸಿದ್ದರಾಮಯ್ಯರವರು ದರ ಏರಿಕೆಯನ್ನು ವಾಪಸ್ ಪಡೆಯಬೇಕು ಎಂದು ಆಗ್ರಹಿಸಿದ ಅವರು, ದರ ಏರಿಕೆ ವಾಪಸ್ ಆಗುವವರೆಗೂ ಬಿಜೆಪಿಯ ಹೋರಾಟ ನಿಲ್ಲದು ಎಂದು ಹೇಳಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯರವರು ಬೇರೆ ರಾಜ್ಯಗಳಲ್ಲಿ ದರ ಹೆಚ್ಚಿದೆ ಎಂಬ ಉಡಾಫೆಯ ಮಾತುಗಳನ್ನು ಬಿಟ್ಟು ಏರಿಸಿರುವ ಪೆಟ್ರೋಲ್-ಡೀಸಲ್ ದರವನ್ನು ವಾಪಸ್ ಪಡೆಯಬೇಕು ಎಂದು ಒತ್ತಾಯಿಸಿದರು.

ಪೆಟ್ರೋಲ್, ಡೀಸೆಲ್ ದರ ಏರಿಕೆ ಖಂಡಿಸಿ ಬಿಜೆಪಿ ಹಮ್ಮಿಕೊಂಡಿದ್ದ ಪ್ರಡಿಭಟನೆಯಲ್ಲಿ ನೂರಾರು ಮಂದಿ ಬಿಜೆಪಿ ಮಹಿಳಾ ಕಾರ್ಯಕರ್ತೆಯರು ಭಾಗವಹಿಸಿದ್ದರು.

ಈ ಹಿಂದೆ ಬಿಜೆಪಿ ಸರ್ಕಾರವಿದ್ದಾಗ ವಿರೋಧ ಪಕ್ಷದ ನಾಯಕರಾಗಿದ್ದ ಸಿದ್ದರಾಮಯ್ಯರವರು ತಮಿಳುನಾಡಿನ ಮುಖ್ಯಮಂತ್ರಿ ಸ್ಟಾಲಿನ್ ಅವರು ಆ ರಾಜ್ಯದಲ್ಲಿ ಪೆಟ್ರೋಲ್-ಡೀಸಲ್ ದರವನ್ನು 3ರೂ. ಇಳಿಕೆ ಮಾಡಿದ್ದರು. ಆಗ ಸಿದ್ದರಾಮಯ್ಯರವರು ರಾಜ್ಯದಲ್ಲೂ ಪೆಟ್ರೋಲ್-ಡೀಸಲ್ ದರ ಇಳಿಕೆ ಮಾಡಬೇಕು ಕಾಂಗ್ರೆಸ್ ಸರ್ಕಾರವಿದ್ದರೆ 10 ರೂ. ಪೆಟ್ರೋಲ್-ಡೀಸಲ್ ದರ ಕಡಿಮೆ ಮಾಡುವುದಾಗಿ ಹೇಳಿದ್ದರು. ಈಗ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರವಿದೆ ಪೆಟ್ರೋಲ್-ಡೀಸಲ್ ದರವನ್ನು 10 ರೂ. ಕಡಿಮೆ ಮಾಡಿ ತಮ್ಮ ಮಾತಿನಂತೆ ನಡೆದುಕೊಳ್ಳಲಿ ಎಂದರು.

ರಾಜ್ಯದಲ್ಲಿ ಅಭಿವೃದ್ಧಿ ಕಾರ್ಯಗಳಿಗೆ ಹಣವಿಲ್ಲದಿರುವುದರಿಂದ ಪೆಟ್ರೋಲ್-ಡೀಸಲ್ ದರ ಏರಿಕೆ ಮಾಡಲಾಗಿದೆ. ಕಾಂಗ್ರೆಸ್‌ನ ಶಾಸಕರಾದ ನಾಡಗೌಡ ಅವರು ಅಭಿವೃದ್ಧಿ ಕಾರ್ಯಗಳಿಗೆ ಅನುದಾನವಿಲ್ಲ. ನಾನು ರಾಜಕೀಯ ಮಾಡುವುದೇ ಕಷ್ಟವಾಗಿದೆ. ಶಾಸಕ ಸ್ಥಾನಕ್ಕೂ ರಾಜೀನಾಮೆ ನೀಡಲು ಸಿದ್ಧ ಎಂದು ಹೇಳಿರುವುದು ರಾಜ್ಯದ ಕಾಂಗ್ರೆಸ್ ಸರ್ಕಾರದ ಆಡಳಿತಕ್ಕೆ ಹಿಡಿದ ಕೈಗನ್ನಡಿ ಎಂದು ಹೇಳಿ ರಾಜ್ಯದ ಆಡಳಿತ ಹೇಗಿದೆ ಎಂಬುದನ್ನು ಕಾಂಗ್ರೆಸ್ ಶಾಸಕರೇ ಜನರ ಮುಂದೆ ಇಟ್ಟಿದ್ದಾರೆ ಎಂದರು.

ರಾಜ್ಯದಲ್ಲಿ ಬಿಜೆಪಿ ಸರ್ಕಾರ ಅಧಿಕಾರದಿಂದ ನಿರ್ಗಮಿಸಿದಾಗ ರಾಜ್ಯದ ಆರ್ಥಿಕ ಸ್ಥಿತಿ ಉತ್ತಮವಾಗಿತ್ತು. ಆದರೆ, ಕಳೆದ 1 ವರ್ಷದಲ್ಲಿ ಆರ್ಥಿಕ ಪರಿಸ್ಥಿತಿ ಹದಗೆಟ್ಟಿದೆ. ಒಂದು ಕಡೆ ಭ್ರಷ್ಟಾಚಾರ,ಮತ್ತೊಂದು ಕಡೆ ಆರ್ಥಿಕ ನಿರ್ವಹಣೆಯ ವೈಫಲ್ಯದಿಂದ ರಾಜ್ಯದ ಜನ ಬೆಲೆ ತೆರುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ದೂರಿದರು.

# ಜೂ.21 ರಂದು ಮುಖ್ಯಮಂತ್ರಿಗಳಿಂದ ಜಿಲ್ಲೆಯ ಪ್ರಗತಿ ಪರಿಶೀಲನಾ ಸಭೆ



ಬಳ್ಳಾರಿ:-

ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಜೂ.21 ರಂದು ಜಿಲ್ಲೆಯ ಪ್ರಗತಿ ಪರಿಶೀಲನಾ ಸಭೆ ಕೈಗೊಳ್ಳುವುದಾಗಿ ತಿಳಿದು ಬಂದಿದ್ದು, ಜಿಲ್ಲಾ ಮಟ್ಟದ ಅಧಿಕಾರಿಗಳು ತಮ್ಮ ಇಲಾಖೆಗಳ ಅಗತ್ಯ ಮಾಹಿತಿಯೊಂದಿಗೆ ಸಿದ್ಧರಿರಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಸೂಚಿಸಿದರು.

ನಗರದ ಜಿಲ್ಲಾ ಪಂಚಾಯತ್‌ನ ನಜೀರ್‌ಸಾಬ್ ಸಭಾಂಗಣದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜೂ.21 ರಂದು ಸಿಎಂ ಸಿದ್ಧರಾಮಯ್ಯನವರು ಬಳ್ಳಾರಿ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ ಎಂದು ಮುಖ್ಯಮಂತ್ರಿಗಳ ಕಚೇರಿಯಿಂದ ಮಾಹಿತಿ ಲಭಿಸಿದ್ದು, ಇದಕ್ಕೆ ಪೂರಕವಾಗಿ ಅಧಿಕಾರಿಗಳು ತಮ್ಮ ಇಲಾಖೆಗಳ ಯೋಜನೆಗಳ ಪ್ರಗತಿ ಮಾಹಿತಿ, ಕಾಮಗಾರಿಗಳ ಸ್ಥಿತಿಗತಿ ಹಾಗೂ ಇತರೆ ಸಮಗ್ರ ವಿವರಗಳನ್ನು ಸಿದ್ಧತೆಯಲ್ಲಿಟ್ಟುಕೊಳ್ಳುವಂತೆ ಅವರು ತಿಳಿಸಿದರು.

ಜಿಲ್ಲೆಯಲ್ಲಿ ಕಳೆದ ಸಾಲಿನಲ್ಲಿ ಉದ್ಭವಿಸಿದ ಬರ ನಿರ್ವಹಣೆಯ ಕ್ರಮ, ಬೆಳೆ ವಿಮೆ, ಬರ ಪರಿಹಾರ ಹಾಗೂ ಪ್ರಸ್ತುತ ಸಾಲಿನ ಮಳೆ ವಿವರ, ರಸಗೊಬ್ಬರ, ಬಿತ್ತನೆ ಬೀಜಗಳ ದಾಸ್ತಾನು ಹಾಗೂ ವಿವಿಧ ಯೋಜನೆಗಳ ಮಾಹಿತಿ ಸಮರ್ಪಕವಾಗಿ ಒದಗಿಸಬೇಕು ಎಂದು ಜಂಟಿ ಕೃಷಿ ನಿರ್ದೇಶಕರಿಗೆ ತಿಳಿಸಿದರು.

ಜಿಲ್ಲೆಯಲ್ಲಿ ಮೇವಿನ ಲಭ್ಯತೆ, ರಾಸುಗಳ ಆರೋಗ್ಯ ಸ್ಥಿತಿ-ಗತಿ, ಬೆಳವಣಿಗೆ ಕ್ರಮ, ಹಾಲು ಉತ್ಪಾದನೆ ಹಾಗೂ ಇತರೆ ಮಾಹಿತಿ ಬಗ್ಗೆ ವಿಚಾರಿಸುವರು. ಈ ಬಗ್ಗೆ ನಿಖರ ಮಾಹಿತಿ ನೀಡಬೇಕು ಎಂದು ಪಶು ಮತ್ತು ಸಂಗೋಪನಾ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯ ಶೈಕ್ಷಣಿಕ ಅಭಿವೃದ್ಧಿಗೆ ಸಂಬಂಧಿಸಿದ ಉಪಕ್ರಮ, ಶಾಲೆಗಳ ಸ್ಥಿತಿ-ಗತಿ, ಗುಣಮಟ್ಟದ ಶಿಕ್ಷಣದ ಕುರಿತಾಗಿ ಅನುಷ್ಠಾನಗೊಳಿಸಿದ ರೂಪು-ರೇಷೆಗಳ ಬಗ್ಗೆ ಮಾಹಿತಿ ಹೊಂದಿರಬೇಕು ಎಂದು ಡಿಡಿಪಿಐ ಅವರಿಗೆ ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿನ ವಸತಿ ಶಾಲೆಗಳಿಗೆ ಭೇಟಿ ನೀಡಬೇಕು. ಅಲ್ಲಿನ ಗುಣಮಟ್ಟದ ಆಹಾರ ಪೂರೈಕೆ, ಸ್ವಚ್ಛತೆ ಹಾಗೂ ಇತರೆ ಮೂಲಭೂತ ಸೌಕರ್ಯಗಳ ಬಗ್ಗೆ ಗಮನಿಸಬೇಕು. ಯಾವುದೇ ದೂರು ಉಲ್ಲೇಖವಾಗಬಾರದು ಎಂದು ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳಿಗೆ ಸೂಚಿಸಿದರು.

ಬಳ್ಳಾರಿ ನಗರದಲ್ಲಿ ಕುಡಿಯುವ ನೀರಿನ ಪೂರೈಕೆ, ರಾಜಕಾಲುವೆಯ ಸ್ವಚ್ಛತೆ, ಕಸ ವಿಲೇವಾರಿ ಪರಿಕ್ರಮ, ರಸ್ತೆಗಳ ಸ್ವಚ್ಛತೆ ಕುರಿತು ಕಾರ್ಪೋರ್ಸ್‌ನ್ನು ಖರಾಗುವಂತೆ ಮಹಾನಗರ ಪಾಲಿಕೆಯ ಆಯುಕ್ತರಿಗೆ ನಿರ್ದೇಶನ ನೀಡಿದರು.

ಗ್ರಾಮೀಣ ಭಾಗಗಳಲ್ಲಿ ಶುದ್ಧ ಕುಡಿಯುವ ನೀರಿನ ಪೂರೈಕೆ, ಸ್ವಚ್ಛತೆಯ ಕ್ರಮನಿರ್ವಹಿಸುವಂತೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖಾಧಿಕಾರಿಗಳಿಗೆ ತಿಳಿಸಿದರು.

ಜನತಾದರ್ಶನ ಕಾರ್ಯಕ್ರಮದಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ವಿವಿಧ ಇಲಾಖೆಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕರಿಂದ ಸಲ್ಲಿಕೆಯಾದ ದೂರುಗಳಿದ್ದಲ್ಲಿ ಕೂಡಲೇ ಬಗಹರಿಸಲು ಕ್ರಮವಹಿಸಬೇಕು ಎಂದು ಎಲ್ಲಾ ಇಲಾಖೆ ಅಧಿಕಾರಿಗಳಿಗೆ ಡಿಸಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದರು.

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಗ್ಯಾರಂಟಿ ಯೋಜನೆಗಳ ಪ್ರಗತಿ ಮತ್ತು ಅವುಗಳ ಅನುಷ್ಠಾನದ ಮಾಹಿತಿಯನ್ನು ಸಂಬಂಧಿಸಿದ ಐದು ಇಲಾಖೆಗಳು ಪೂರಕ ಮಾಹಿತಿಯೊಂದಿಗೆ ಸಿದ್ಧತೆಯಲ್ಲಿರಬೇಕು ಎಂದು ತಿಳಿಸಿದರು.

ಜಿಲ್ಲಾ ಮಟ್ಟದ ಅಧಿಕಾರಿಗಳು ತಮ್ಮ ವ್ಯಾಪ್ತಿಯ ತಾಲ್ಲೂಕು ಮಟ್ಟದಲ್ಲಿ ಸಮಸ್ಯೆ ಕಂಡುಬಂದಲ್ಲಿ ಸ್ಥಳೀಯ ಶಾಸಕರ ಗಮನಕ್ಕೆ ತರಬೇಕು. ಪ್ರಗತಿ ಪರಿಶೀಲನಾ ಸಭೆಯ ದಿನದಂದು ಯಾವೊಬ್ಬ ಅಧಿಕಾರಿಯೂ ಗೈರು ಹಾಜರಾದರೇ ನಿರ್ದಾಕ್ಷಿಣ್ಯವಾಗಿ ಅಮಾನತುಗೊಳಿಸಲಾಗುವುದು ಎಂದು ಎಚ್ಚರಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ ಅವರು ಮಾತನಾಡಿ, ಯಾವುದೇ ಇಲಾಖೆಗಳ ಅಧಿಕಾರಿಗಳು ತಮ್ಮ ಕಾರ್ಯದಲ್ಲಿ ಅಗತ್ಯ ಸಹಕಾರ ಬೇಕಾದಲ್ಲಿ ಇತರೆ ಅಧಿಕಾರಿಗಳೊಂದಿಗೆ ನಿಕಟ ಸಂಪರ್ಕದಲ್ಲಿರಬೇಕು ಎಂದರು.

ದೈನಂದಿನ ಪತ್ರಿಕೆಗಳಲ್ಲಿ ವರದಿಯಾಗುವ ತಮ್ಮ ಇಲಾಖೆಗಳಿಗೆ ಸಂಬಂಧಿತ ಸಮಸ್ಯೆಗಳ ವರದಿಯನ್ನು ಗಂಭೀರವಾಗಿ ಪರಿಗಣಿಸಿ, ತ್ವರಿತಗತಿಯಲ್ಲಿ ಸೂಕ್ತ ಕ್ರಮ ಕೈಗೊಳ್ಳಬೇಕು. ಆಯಾ ಸಾಲಿನ ಯೋಜನೆಗಳ ಕಾರ್ಯಪ್ರಗತಿ ವಿವರ ಕಡ್ಡಾಯವಾಗಿ ಇಟ್ಟುಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಝುಬೇರ್ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.


# ಕೌಟುಂಬಿಕ ವ್ಯವಸ್ಥೆಯ ಸಫಲತೆಯಲ್ಲಿ ತಂದೆಯ ಪಾತ್ರ ಅನನ್ಯ



ಕಲಬುರಗಿ:-

ತಂದೆಯ ತ್ಯಾಗ, ಪ್ರೀತಿ, ಪ್ರೇಮ ಮರೆಯಬಾರದು. ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ತನ್ನತನವನ್ನು ತೊರೆದು, ಎಲ್ಲವೂ ಮಕ್ಕಳಿಗಾಗಿ ಧಾರೆಯೆರೆಯುವ ಮೂಲಕ ಮಕ್ಕಳ ಭವಿಷ್ಯವನ್ನು ನಿರ್ಮಿಸುವ ಶಿಲ್ಪಿ ತಂದೆಯಾಗಿದ್ದಾನೆ. ಇಡೀ ತನ್ನ ಜೀವನದುದ್ದಕ್ಕೂ ಕುಟುಂಬದ ಲೇಸನ್ನೇ ಬಯಸುವ ಮೂಲಕ ಕೌಟುಂಬಿಕ ವ್ಯವಸ್ಥೆಯ ಸಫಲತೆಯಲ್ಲಿ ತಂದೆಯ ಪಾತ್ರ ಅನನ್ಯವಾಗಿದೆ ಎಂದು ಗುವಿವಿ ವಿಶ್ರಾಂತ ಪ್ರಾಧ್ಯಾಪಕ ಡಾ.ವಾಸುದೇವ ಸೇಡಂ ಎಚ್. ಅಭಿಮತಪಟ್ಟರು. ನಗರದ ಶಹಾಬಜಾರ ಮಹಾದೇವ ನಗರದಲ್ಲಿರುವ 'ಸ್ವಾತಿ ಪ್ರೌಢಶಾಲೆ'ಯಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಭಾನುವಾರ ಆಯೋಜಿಸಲಾಗಿದ್ದ 'ವಿಶ್ವ ಅಪ್ಪಂದಿರ ದಿನಾಚರಣೆ'ಯನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು. ತನಗಾಗಿ ಏನನ್ನು ಪ್ರಾರ್ಥಿಸದ ತಾಯಿ, ತನಗಾಗಿ ಏನನ್ನು ಮಾಡದ ತಂದೆ ಇಬ್ಬರು ಕಣ್ಣಿಗೆ ಕಾಣುವ ದೇವರು. ಅವರನ್ನು ಚೆನ್ನಾಗಿ ನೋಡಿಕೊಳ್ಳಬೇಕು ಎಂದರು. ಸಮಾಜ ಸೇವಕ ಡಾ.ಸುನೀಲಕುಮಾರ ಎಚ್.ವಂಟಿ ಮಾತನಾಡಿ, ಮಕ್ಕಳಿಗೆ ಉತ್ತಮವಾದ ಶಿಕ್ಷಣ, ಸಂಸ್ಕಾರ, ಮೌಲ್ಯಗಳು, ನೀಡಿ, ಜೋಪಾನ ಮಾಡಿ ಮಗುವನ್ನು ದೊಡ್ಡವನನ್ನಾಗಿ ಮಾಡುವಲ್ಲಿ ತಂದೆಯ ಪಾತ್ರ ಮರೆಯುವಂತಿಲ್ಲ. ಆತನ ಇಳಿ ವಯಸ್ಸಿನಲ್ಲಿ ವೃದ್ಧಾಶ್ರಮಕ್ಕೆ ನೂಕುವ ನೀಚ ಬುದ್ಧಿ ಮಕ್ಕಳು ಎಂದಿಗೂ ಮಾಡಬಾರದು. ತಾಯಿ-ತಂದೆಗೆ ಸಮಾನವಾದ ಗೌರವ ನೀಡಬೇಕು ಎಂದರು. ಕಾರ್ಯಕ್ರಮದಲ್ಲಿ ಬಳಗದ ಅಧ್ಯಕ್ಷ ಹಾಗೂ ಉಪನ್ಯಾಸಕ ಎಚ್.ಬಿ.ಪಾಟೀಲ, ಸಮಾಜ ಸೇವಕ ಶಿವಯೋಗೆಪ್ಪಾ ಎಸ್.ಬಿರಾದಾರ, ಜಿಲ್ಲಾ ಸರ್ಕಾರಿ ನೌಕರರ ಸಂಘದ ಪತ್ರಿಕಾ ಕಾರ್ಯದರ್ಶಿ ದೇವೇಂದ್ರಪ್ಪ ಗಣಮುಖಿ, ಸಂಸ್ಥೆಯ ಅಧ್ಯಕ್ಷ ಚನ್ನಬಸಪ್ಪ ಗಾರಂಪಳ್ಳಿ, ಶಾಲೆಯ ಮುಖ್ಯ ಶಿಕ್ಷಕಿ ಸಂಗೀತಾ ಸಾಲಿ, ಶಿಕ್ಷಕರಾದ ಶಿಕ್ಷಕರಾದ ಪೂರ್ಣಿಮಾ ಪಾಟೀಲ, ಪ್ರಿಯಾಂಕಾ ಪಿ.ಕೆ, ಶಿಲ್ಪಾ ಎಸ್.ಕೆ ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

# ಮೊಬೈಲ್ ದುರ್ಬಳಕೆ ಸೈಬರ್ ಅಪರಾಧಗಳ ಮೂಲ




ಧಾರವಾಡ:-

ಮಕ್ಕಳ ಮುಂದೆ ಮೊಬೈಲ್ ಬಳಸದೇ ಪುಸ್ತಕ ಹಿಡಿಯಿರಿ, ಪಾಲಕರು ಏನು ಮಾಡುತ್ತಾರೋ ಮಕ್ಕಳು ಅದನ್ನೇ ಮಾಡುವರು. ಮಕ್ಕಳು ಪಾಲಕರ ಪ್ರತಿಬಿಂಬ ಎಂಬುದನ್ನು ಮರೆಯಬಾರದು.ಇಂದುಯುವಕರುದ ಾರಿತಪ್ಪುತ್ತಿರುವುದೇ ಪಾಲಕರ ನಡೆ-ನುಡಿಯಿಂದಎಂದುಧಾರವಾಡಕೇಂದ್ರಕಾರಾಗ್ರಹದಆಂತರಿಕ ಭದ್ರತಾಅಧಿಕಾರಿ ಶಿವರಾಜ ಪಾಟೀಲ ನುಡಿದರು.

ಅವರುಕರ್ನಾಟಕ ವಿದ್ಯಾವರ್ಧಕ ಸಂಘದ ಮಹಿಳಾ ಮಂಟಪವು ಆಯೋಜಿಸಿದ್ದ ಸೈಬರ್‌ಅಪರಾಧ ಮಾಹಿತಿ ನೀಡುವಉಪನ್ಯಾಸ 'ಕಾರ್ಯಕ್ರಮದಅತಿಥಿಯಾಗಿ ಮಾತನಾಡುತ್ತಿದ್ದರು.

ಅವರು ಮುಂದುವರೆದು ಮಾತನಾಡುತ್ತಾ ಸೈಬರ್‌ಕ್ರೈಮ್‌ಗೆ ಒಳಗಾಗುವವರು ಹಳ್ಳಿಯ ರೈತಾಪಿ, ಕೂಲಿಕಾರರುಅಲ್ಲ, ಒಳ್ಳೆಯ ಶಿಕ್ಷಣ ಪಡೆದವರೇ ಹೆಚ್ಚು ಸೈಬರ್ ಕ್ರೈಮ್‌ಗಳಿಗೆ ಬಲಿಯಾಗುತ್ತಿರುವುದು ವಿಪರ್ಯಾಸವಾಗಿದೆ.ಇಂದು ತಾಳ್ಮೆಯಿಂದ ಯಾವುದು ಸರಿಯಾವುದು ತಪ್ಪುಎಂದುಯೋಚನೆ ಮಾಡುವುದನ್ನು ಬಿಟ್ಟು, ಆಸೆಗೆ ಬಿದ್ದುಇಂಥಅಪರಾಧ ಮಾಡುವವರಜಾಲದಲ್ಲಿ ಸಿಲುಕುವುದು ಸಾಮಾನ್ಯವಾಗಿದೆ.ಯುವಕರು, ವಿದ್ಯಾರ್ಥಿಗಳು ಈ ಸೈಬರ್‌ಕ್ರೈಮ್‌ದ ಆಳ ಅಗಲವನ್ನು ಸರಿಯಾಗಿ ತಿಳಿದುಕೊಳ್ಳುವುದಕ್ಕಾಗಿ ಇಂಥ ಮಾಹಿತಿ ನೀಡುವ ಉಪನ್ಯಾಸಗಳು ಹೆಚ್ಚು ಹೆಚ್ಚು ನಡೆಯುವಂತಾಗಬೇಕುಎಂದರು.

ಹುಬ್ಬಳ್ಳಿ-ಧಾರವಾಡ ಸೈಬರ್‌ಅಪರಾಧ ವಿಭಾಗದ ಶಿವಾನಂದ ತಿಮ್ಮಾಪೂರ ಸೈಬರ್ ಅಪರಾಧ ಅಂದರೆ ಏನು? ಅದರ ಸ್ವರೂಪಗಳು ಎಂಥವಿರುತ್ತವೆ? ಎಂಥವರು ಇದಕ್ಕೆ ಬಲಿಯಾಗುತ್ತಾರೆ? ಹೇಗೆ ಬಲಿ ಹಾಕುತ್ತಾರೆ? ಎನ್ನುವ ಕುರಿತು ವಿಸ್ತೃತವಾಗಿ ವಿದ್ಯಾರ್ಥಿಗಳಿಗೆ ಉದಾಹರಣೆಗಳೊಂದಿಗೆ ಎಳೆ ಎಳೆಯಾಗಿ ವಿದ್ಯಾರ್ಥಿಗಳಿಗೆ ಮನಮಟ್ಟುವಂತೆ ಹೇಳುತ್ತಾ, ಯಾವುದೇ ಯ್ಯಾಪಗಳನ್ನು, ಅರ್ಜಿಗಳನ್ನು, ಗೂಗಲ್ ದಿಂದ ಡೌನ್‌ಲೋಡ್ ಮಾಡುವಾಗ ಎಚ್ಚರಿಕೆಯಿಂದ ಇರಬೇಕು. ಇನಸ್ಟಾಗ್ರಾಮ್ ಬಳಸುವವರು ನಮಗೆ ಗೊತ್ತಿರದ ಫೋಟೊಗಳಿಗೆ ಲೈಕ್‌ಒತ್ತುವುದನ್ನು ನಿಲ್ಲಿಸಬೇಕು. ಒಂದು ಲೈಕ್ ಒತ್ತುವ ಮೂಲಕ ನಿಮ್ಮ ಪ್ರೊಫೈಲ್‌ದಲ್ಲಿಯ ಎಲ್ಲ ಮಾಹಿತಿ, ಫೋಟೊಗಳು ಅವರಿಗೆ ಲಭ್ಯವಾಗುತ್ತವೆ. ಅವನ್ನು ಇಟ್ಟುಕೊಂಡು ನಿಮ್ಮ ಸಲಿಗೆ ಬೆಳೆಸಿ ಮುಂದೊಂದು ದಿನ ನಿಮ್ಮನ್ನು ಬ್ಲ್ಯಾಕ್‌ಮೇಲ್ ಮಾಡಲು ಮುಂದಾಗುತ್ತಾರೆ, ಇಲ್ಲವೇ ನಿಮ್ಮ ಅಕೌಂಟ್ ಹಣಕ್ಕೆ ಕನ್ನ ಹಾಕುವುದನ್ನು ಮಾಡುತ್ತಾರೆ. ಮೊಬೈಲ್ ಎಷ್ಟು ಕಡಿಮೆ ಉಪಯೋಗ ಮಾಡುತ್ತೀರೋ ಅಷ್ಟು ವಿದ್ಯಾರ್ಥಿಗಳಿಗೆ ಒಳ್ಳೆಯದು.ಅದೇ ವೇಳೆಯನ್ನು ಪುಸ್ತಕ ಓದುವುದನ್ನು ಮಾಡಿದರೆ ನಿಮ್ಮಜ್ಞಾನದಕ್ಷಿತಿಜ ವಿಸ್ತಾರಗೊಳ್ಳುವುದು.

ಮನೆಯಲ್ಲಿ ಕುಳಿತು ಹಣ ಗಳಿಸಿರಿ, ಪಾರ್ಟ್‌ಟೈಮ್‌ಜಾಬ್ ಮಾಡಿ ಸಾವಿರ ಸಾವಿರ ಹಣ ಪಡೆಯಿರಿ.. ಹೀಗೆ ಹಲವು ರೀತಿಯಜಾಹಿರಾತು ನಂಬಿ ಮೋಸಹೋಗುವುದು ಸಾಮಾನ್ಯವಾಗಿದೆ.ದೊಡ್ಡದೊಡ್ಡ ವೈದ್ಯರೂಕೋಟಿಕೋಟಿ ಹಣ ಕಳೆದುಕೊಂಡಿದ್ದಾರೆ. ಯಾವುದು ಸರಿಯಾವುದುತಪ್ಪುಎಂದು ವಿವೇಕ ಬಳಸದೇ ಇದ್ದುದಕ್ಕೆಇಂದು ಸೈಬರ್‌ಅಪರಾದ ಮಾಡುವವರ ಸಂಖ್ಯೆ ಹೆಚ್ಚಾಗುತ್ತಿದೆ.ಅದಕ್ಕಾಗಿ ವಿದ್ಯಾರ್ಥಿಗಳು ತಮ್ಮತಮ್ಮ ಮನೆಯಲ್ಲಿ ಪಾಲಕರಿಗೆ ತಿಳಿಹೇಳಿ.ಇಲ್ಲಿ ಪಡೆದ ಮಾಹಿತಿಯನ್ನು ನಿಮ್ಮ ಸ್ನೇಹಿತರೊಂದಿಗೆ ಹಂಚಿಕೊಳ್ಳಿ.

ಸೈಬರ್‌ಜಾಲದಲ್ಲಿ ಬೀಳದಂತೆ ಒಂದು ಅಭಿಯಾಣವನ್ನು ಮಾಡುವುದು ಅವಶ್ಯವಿದೆ.

ಆ ನಿಟ್ಟಿನಲ್ಲಿ ಪ್ರತಿಕಾಲೇಜಿನ ವಿದ್ಯಾರ್ಥಿಗಳು ಒಂದುತಂಡ ಮಾಡಿಕೊಂಡು ಕಾರ್ಯಪ್ರವೃತ್ತರಾಗಬೇಕಿದೆ. ತಂತ್ರಜ್ಞಾನ ಹೆಚ್ಚಾದಂತೆ ಅಪರಾಧಗಳೂ ಹೆಚ್ಚಾಗುತ್ತಾ ನಡೆದಿದ್ದು, ಯುವಜನಾಂಗಎಚ್ಚರಿಕೆಯ ಹೆಜ್ಜೆಇಡಬೇಕಿದೆ.

ಪೆಡ್ಲೆಕೋರಿಯರ್ ಮನೆಗೆ ಬರುತ್ತದೆ. ಇದರ ಮೂಲಕ ನಿಮಗೆ ಡ್ರಗ್ಸ್ ಮನೆಯಲ್ಲಿ ಇರುತ್ತದೆ. ಈ ಮೂಲಕ ನಿಮ್ಮನ್ನು ಸಿಬಿಐದವರು ಎಂದು ಫೋನ್ ಮಾಡಿ ಬ್ಲ್ಯಾಕ್ ಮೇಲ್ ಮಾಡಲು ಶುರುಮಾಡುತ್ತಾರೆ. ಇಂಥ ಹಲವು ರೀತಿಯಲ್ಲಿ ಸೈಬರ್‌ಕ್ರೈಮ್ ನಡೆಯುತ್ತವೆ. ಇಂಥಕೋರಿಯರ್ ಗಳಿಂದ ಎಚ್ಚರಿಕೆಯಿಂದ ಇರಬೇಕು. ಕರ್ನಾಟಕ ಪೊಲೀಸ್ ಯ್ಯಾಪ್ ಡೌನಲೋಡ್ ಮಾಡಿಟ್ಟುಕೊಂಡಿರಿ.ನಿಮಗೆ ಯಾವುದೇ ವೆಬ್‌ಸೈಟ್, ಲಿಂಗಗಳು ಬಂದರೆ ಅವು ನಿಜವಿದ್ದಾವೆಯೇ ಎಂದು ತಿಳಿದುಕೊಳ್ಳಬೇಕಾದರೆ ಕರ್ನಾಟಕ ಪೊಲೀಸ್ ಯ್ಯಾಗೆಗೆ ಹೋಗಿ ಆ ಲಿಂಗಗಳನ್ನು ಹಂಚಿಕೊಂಡರೆ ಸಾಕು, ಆ ಲಿಂಕಗಳ ಸತ್ಯಾಸತ್ಯತೆಯ ಕುರಿತು ಮಾಹಿತಿ ನೀಡಲಾಗುವುದು. ಮೊಬೈಲ್ ಕಳೆದುಕೊಂಡಿದ್ದರೆ ಸಿಇಐರ್ ಪೋರ್ಟಲ್ ಗೆ ಹೋಗಿ ಮೊಬೈಲ್ ಮಾಹಿತಿ ನೀಡಿದರೆ ನಿಮಗೆ ಪೊಲೀಸ್ ಇಲಾಖೆ ನಿಮ್ಮ ಮೊಬೈಲ್ ಹುಡಿಕಿಕೊಡುವುದು.ಹೀಗೆ ಹಲವು ರೀತಿಯಲ್ಲಿ ಸೈಬರ್ ಕ್ರೈಮ್‌ಗಳನ್ನು ತಡೆಯುವ ಪ್ರಯತ್ನ ಇಲಾಖೆ ಮಾಡುತ್ತಿದೆ.ಪೊಲೀಸ್ ಇಲಾಖೆ ಒಂದೇ ಮಾಡಿದರೆ ಸಾಲದು ಜನರೂಎಚ್ಚರಗೊಂಡು ಸೈಬರ್‌ಕ್ರೈಮ್ ತಡೆಯುವಕಾರ್ಯದಲ್ಲಿಕೈಜೋಡಿಸಬೇಕುಎಂದು ಶಿವಾನಂದ ತಿಮ್ಮಾಪೂರ ಹೇಳಿದರು.

ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ ಹಲವಾರು ಮಾಹಿತಿಯನ್ನು ನೀಡಿದರು.

ಕರ್ನಾಟಕ ವಿದ್ಯಾವರ್ಧಕ ಸಂಘದಉಪಾಧ್ಯಕ್ಷೆ ಮಾಲತಿ ಪಟ್ಟಣಶೆಟ್ಟಿಅಧ್ಯಕ್ಷತೆ ವಹಿಸಿಕೊಂಡು ಮಾತನಾಡಿದರು.

ಪ್ರಧಾನ ಕಾರ್ಯದರ್ಶಿ ಶಂಕರ ಹಲಗತ್ತಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಮಹಿಳಾ ಮಂಟಪದ ಸಂಚಾಲಕಿ ಡಾ.ಶೈಲಜಾಅಮರಶೆಟ್ಟಿ ಸ್ವಾಗತಿಸಿದರು. ಜ್ಯೋತಿ ಭಾವಿಕಟ್ಟಿ ವಂದಿಸಿದರು. ಡಾ. ವಿ. ಶಾರದಾ ಅತಿಥಿಗಳನ್ನು ಪರಿಚಯಿಸಿದರು.ಸವಿತಾಕುಸುಗಲ್ಲ ನಿರೂಪಿಸಿದರು.ಕರ್ನಾಟಕಕಾಲೇಜಿನ ವಿದ್ಯಾರ್ಥಿನಿ ಕಾವೇರಿ ಪ್ರಾರ್ಥಿಸಿದರು.

ಧಾರವಾಡದ ವಿವಿಧ ಕಾಲೇಜುಗಳಿಂದ ಸುಮಾರು 200 ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ಅನೇಕ ಪ್ರಶ್ನೆಗಳ ಮೂಲಕ ಸಂವಾದಕಾರ್ಯಕ್ರವನ್ನು ಅರ್ಥಪೂರ್ಣಗೊಳಿಸಿದರು. ವಿವಿಧ ಕಾಲೇಜುಗಳ ಪ್ರಾಧ್ಯಾಪಕರು ಹಾಗೂ ಮಹಿಳಾ ಮಂಟಪದ ಸಲಹಾ ಸಮಿತಿ ಸದಸ್ಯರು, ಪ್ರೊ. ಎಂ.ಆರ್. ಈಶಣ್ಣ, ನಿರ್ಮಲಾಚಿಗಟೇರಿ, ಮಹಾಂತೇಶ ನರೇಗಲ್ಲ, ಬೆಟಗೇರಿ, ಪ್ರಮೀಳಾ ಜಕ್ಕಣ್ಣವರ ಸೇರಿದಂತೆ ಮುಂತಾದವರಿದ್ದರು.

# ಸ್ವಯಂ ಪ್ರೇರಿತವಾಗಿ ರಕ್ತದಾನ ಮಾಡಿದ ಯುವಕರು



ಗುಳೇದಗುಡ್ಡ:-

ಮಾಹೇಶ್ವರಿ ಸಮಾಜದ 5157ನೇ ವರ್ಷದ ಉತ್ಪತ್ತಿ ದಿವಸದ ಅಂಗವಾಗಿ ಕರ್ನಾಟಕ ಗೋವಾ ಪ್ರಾಂತೀಯ ಯುವ ಸಂಘಟನೆ ಮತ್ತು ಸ್ಥಳೀಯ ಮಾಹೇಶ್ವರಿ ಯುವ ಸಂಘಟನೆಯು ಬಾದಾಮಿಯ ಶ್ರೀ ಬನಶಂಕರಿ ಬ್ಲಡ್ ಬ್ಯಾಂಕ್ ಸಹಯೋಗದೊಂದಿಗೆ ಶನಿವಾರ ಪಟ್ಟಣದ ಹೊಸ ಬಾಲಾಜಿ ಪಂಚಾಯತ್ ಭವನದಲ್ಲಿ ಹಮ್ಮಿಕೊಂಡಿದ್ದ ಸ್ವಯಂ ಪ್ರೇರಿತ ರಕ್ತದಾನ ಶಿಬಿರವನ್ನು ಮಾಹೇಶ್ವರಿ ಸಮಾಜದ ಅಖಿಲ ಭಾರತೀಯ ಕಾರ್ಯಕಾರಣಿ ಸದಸ್ಯ ಕಮಲಕಿಶೋರ ಮಾಲಪಾಣಿ ಶಿಬಿರವನ್ನು ಉದ್ಘಾಟಿಸಿದರು.

ಶಿಬಿರದಲ್ಲಿ ಸುಮಾರು ಐವತ್ತಕ್ಕೂ ಹೆಚ್ಚು ಜನರು ಸ್ವಯಂ ಪ್ರೇರಿತವಾಗಿ ರಕ್ತದಾನ ಮಾಡಿದರು.

ಈ ಸಂದರ್ಭದಲ್ಲಿ ಸಂಘಟನೆಯ ಅಧ್ಯಕ್ಷ ದೀಪಕ ದೂತ, ಕಾರ್ಯದರ್ಶಿ ಭರತಕುಮಾರ ದೂತ, ಸಂಘದ ಬಾಗಲಕೊಟ, ಬಿಜಾಪೂರ ಸಂಯುಕ್ತ ಜಿಲ್ಲಾ ಕಾರ್ಯದರ್ಶಿ ಅನೂಪ ತಾಪಡಿಯಾ, ಬನಶಂಕರಿ ಬ್ಲಡ್ ಬ್ಯಾಂಕ್‌ನ ಮುಖ್ಯಸ್ಥ ಕಲ್ಲಪ್ಪ ಅಮೀನಬಾವಿ, ಭರತಕುಮಾರ ಧರಕ, ಗೋಪಾಲದಾಸ ಮಾಲಪಾಣಿ, ಕಮಲಕಿಶೋರ ಮಾಲಪಾಣಿ, ಕಮಲಕಿಶೋರ ತಾಪಡಿಯಾ, ಸಂತೋಷ ಮಂತ್ರಿ, ಸುಮನಬಾಯಿ ದೂತ, ಲತಾ ತಾಪಡಿಯಾ, ಶರಿಯೂ ಜಾಜು, ಕಿಶೋರ ಸೋನಿ, ಲಖನ್ ಉಪಾಧ್ಯ, ಡಾ. ಶ್ರೀಕಾಂತ ಸೋನಿ ಮತ್ತಿತರರು ಇದ್ದರು.

# ಮಕ್ಕಳಿಗೆ, ಪೋಷಕರಿಗೆ ಅರಿವು ಮೂಡಿಸುವಲ್ಲಿ ಶಿಕ್ಷಕರ ಪಾತ್ರ ಮಹತ್ವದ್ದು : ನ್ಯಾ.ರಾಜೇಶ್ ಎನ್.ಹೊಸಮನೆ




ಬಳ್ಳಾರಿ,ಜೂ.16:

ಬಾಲ್ಯ ವಿವಾಹ, ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ತಡೆಗಟ್ಟುವ ಕುರಿತು ಮಕ್ಕಳಿಗೆ ಮತ್ತು ಪೋಷಕರಿಗೆ ಅರಿವು ಮೂಡಿಸುವಲ್ಲಿ ಶಿಕ್ಷಕರ ಪಾತ್ರ ಮಹತ್ವದ್ದಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಧೀಶರಾದ ರಾಜೇಶ್ ಎನ್.ಹೊಸಮನೆ ಅವರು ಹೇಳಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ರಾಜ್ಯ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಇವರ ಸಂಯುಕ್ತಾಶ್ರಯದಲ್ಲಿ 'ಬಾಲ್ಯವಿವಾಹ, ಪೋಕ್ಸೊ ಕಾಯ್ದೆ ಹಾಗೂ ಮಕ್ಕಳ ರಕ್ಷಣಾ ನೀತಿ 2016 (ಪರಿಷ್ಕರಣೆ-2023)' ಕುರಿತು ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರು ಹಾಗೂ ಸರ್ಕಾರಿ, ಅನುದಾನಿತ ಪ್ರೌಢಶಾಲೆಯ ಮುಖ್ಯ ಗುರುಗಳಿಗೆ ನಗರದ ಕೋಟೆ ಪ್ರದೇಶದ ಜಿಲ್ಲಾ ಪಂಚಾಯತ್‌ನ ನಜೀರ್ ಸಭಾಂಗಣದಲ್ಲಿ ಶನಿವಾರ ಏರ್ಪಡಿಸಿದ್ದ ಒಂದು ದಿನದ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳನ್ನು ಲೈಂಗಿಕ ದೌರ್ಜನ್ಯದಿಂದ ರಕ್ಷಣೆ ಕೊಡಿಸಬೇಕು. ಹೆಣ್ಣು ಮಕ್ಕಳಿಗೆ ಶಿಕ್ಷಣ ಒದಗಿಸಿ ಸಮಾಜದಲ್ಲಿ ಸಮಾನತೆ ಒದಗಿಸುವುದು ಅಧಿಕಾರಿಗಳ ಕರ್ತವ್ಯವಾಗಿದೆ ಎಂದರು. ಬಾಲ್ಯ ವಿವಾಹವು ಸಾಮಾಜಿಕ ಪಿಡುಗಾಗಿದ್ದು, ಹೆಣ್ಣು ಮಕ್ಕಳ ಮೇಲೆ ಮಾನಸಿಕ ಒತ್ತಡ ಮತ್ತು ದೈಹಿಕವಾಗಿ ದುಷ್ಪರಿಣಾಮ ಬೀರುತ್ತದೆ. ಈ ಬಗ್ಗೆ ಶಾಲಾ-ಕಾಲೇಜುಗಳಲ್ಲಿ ಅರಿವು ಮೂಡಿಸುವ ಅಗತ್ಯವಿದೆ. ಈ ದಿಸೆಯಲ್ಲಿ ಶಿಕ್ಷಕರು ಮಹತ್ವದ ಜವಾಬ್ದಾರಿ ನಿರ್ವಹಿಸಬೇಕು ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ ಮಾತನಾಡಿ, ರಾಷ್ಟ್ರ ಸಮಗ್ರ ಅಭಿವೃದ್ಧಿ ಹೊಂದಲು ಆರ್ಥಿಕ, ತಾಂತ್ರಿಕ, ಶೈಕ್ಷಣಿಕದ ಜೊತೆಗೆ ಕಾನೂನಾತ್ಮಕವಾಗಿ ಹೆಣ್ಣುಮಕ್ಕಳ ಬೆಳವಣಿಗೆ ಮುಖ್ಯವಾಗುತ್ತದೆ ಎಂದರು. 13 ರಿಂದ 18 ವರ್ಷದೊಳಗಿನ ಮಕ್ಕಳನ್ನು ದಾರಿತಪ್ಪದಂತೆ ನೋಡಿಕೊಳ್ಳುವುದು ಪೋಷಕರ ಮತ್ತು ಶಿಕ್ಷಕರ ಕರ್ತವ್ಯವಾಗಿದೆ. ಹೆಣ್ಣು ಮಕ್ಕಳು ಶಿಕ್ಷಣದಿಂದ ವಂಚಿತರಾಗದೇ ಶೈಕ್ಷಣಿಕವಾಗಿ ವಿದ್ಯಾವಂತರಾದಾಗ ಕುಟುಂಬದ ಏಳಿಗೆಗೆ ಸಹಕಾರಿಯಾಗುತ್ತದೆ ಎಂದು ತಿಳಿಸಿದರು. ಬಾಲ್ಯ ವಿವಾಹ ನಿಯಂತ್ರಿಸಲು, ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ತಡೆಗಟ್ಟಲು ಪೋಕ್ಸೋ ಕಾಯ್ದೆಯಡಿ ಸಮಾಲೋಚನೆ ಕೇಂದ್ರ ತೆರೆಯಲಾಗಿದ್ದು, ಮಕ್ಕಳ ಸಹಾಯವಾಣಿ 1098 ಗೆ ಸಂಪರ್ಕಿಸುವಂತೆ ಅರಿವು ಮೂಡಿಸಬೇಕು ಎಂದು ತಿಳಿಸಿದರು.

ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ವಿಜಯಲಕ್ಷ್ಮೀ ಮೈದೂರು ಅವರು ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿ ಮಾತನಾಡಿ, ಶಾಲಾ-ಕಾಲೇಜುಗಳಲ್ಲಿ ಹೆಣ್ಣು ಮಕ್ಕಳಿಗೆ ಹಿಂಸೆ ಆದಾಗ ಅಥವಾ ತೊಂದರೆಗೆ ಒಳಗಾದಾಗ ಮೊದಲು ಶಿಕ್ಷಕರಿಗೆ ತಿಳಿಸಲು ಮುಂದಾಗುತ್ತಾರೆ, ವಿದ್ಯಾರ್ಥಿಗಳ ಮಾನಸಿಕ ಭಾವನೆಗಳನ್ನು ಶಿಕ್ಷಕರು ಅರಿತು ಮಕ್ಕಳಿಗೆ ಕಾನೂನಾತ್ಮಕ ನ್ಯಾಯ ಒದಗಿಸುವುವು ಅವರ ಕರ್ತವ್ಯವಾಗಿದೆ ಎಂದರು. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ವಿಜಯ್ ಕುಮಾರ್ ಕೆ.ಹೆಚ್ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಶಿಕ್ಷಕರು ಮಕ್ಕಳ ಸಮಸ್ಯೆಗಳನ್ನು ಅರಿತುಕೊಂಡು ಸಂಬಂಧಪಟ್ಟ ಇಲಾಖೆಗೆ ಮಾಹಿತಿ ಒದಗಿಸಬೇಕು. ಸರ್ಕಾದ ಆದೇಶದಂತೆ ಪ್ರತಿ ಶಾಲೆಗಳಲ್ಲಿ ಮಕ್ಕಳ ರಕ್ಷಣಾ ಸಮಿತಿ ರಚಿಸಬೇಕು. ಮೂರು ತಿಂಗಳಿಗೊಮ್ಮೆ ಸಭೆ ನಡೆಸಿ ವರದಿ ನೀಡಬೇಕು. ಮಕ್ಕಳ ಬಗ್ಗೆ ಶಿಕ್ಷಕರು ಕಾಳಜಿ ವಹಿಸಬೇಕು ಎಂದು ಹೇಳಿದರು.

ಬಳಿಕ ಕೊಪ್ಪಳ ಯೂನಿಸೇಫ್ ಮಕ್ಕಳ ಸಂರಕ್ಷಣಾ ಯೋಜನೆಯ ಪ್ರಾದೇಶಿಕ ಸಂಯೋಜಕರಾದ ಡಾ.ಕೆ.ರಾಘವೇಂದ್ರ ಭಟ್ ಅವರು 'ಬಾಲ್ಯವಿವಾಹ, ಪೋಕ್ಸೊ ಕಾಯ್ದೆ ಹಾಗೂ ಮಕ್ಕಳ ರಕ್ಷಣಾ ನೀತಿ 2016 (ಪರಿಷ್ಕರಣೆ-2023)' ಕುರಿತು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕಿ ಉಮಾದೇವಿ, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಹಾಗೂ ಪ್ರಭಾರಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಜಲಾಲಪ್ಪ.ಎ.ಕೆ ಸಿಬ್ಬಂದಿ ಸೇರಿದಂತೆ ಕಾಲೇಜು ಪ್ರಾಂಶುಪಾಲರು, ಶಾಲಾ ಮುಖ್ಯೋಪಾಧ್ಯಾಯರು ಉಪಸ್ಥಿತರಿದ್ದರು.

Editor:S.K.Wadeyar,#378/379, “MAYAGAPPA COMPLEX” 1st Stage 6th Phase Industrial Town west of chord Road Rajajinagar Bengaluru-560044.Karnataka.
Publisher:S.K.Wadeyar,#378/379, “MAYAGAPPA COMPLEX” 1st Stage 6th Phase Industrial Town west of chord Road Rajajinagar Bengaluru-560044.Karnataka.
Printer:SUCHITHRA PRINTER’s & PUBLISHER’s,#378/379, “MAYAGAPPA COMPLEX” 1se Stage 6th Phase Industrial Town west of chord Road Rajajinagar Bengaluru-560044.Karnataka.
Owner:S.K.Wadeyar,#378/379, “MAYAGAPPA COMPLEX” 1se Stage 6th Phase Industrial Town west of chord Road Rajajinagar Bengaluru-560044.Karnataka.